ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 52

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶನಿವಾರ: 31-01-2026



ಸುದ್ದಿ ಮತ್ತು ಜಾಹೀರಾತಿಗಾಗಿ

6360866626


## ಕನ್ನಡ ಸಾರಸ್ವತ ಲೋಕವನ್ನು ಶ್ರೀಮಂತಗೊಳಿಸಿರುವ ರಾಷ್ಟ್ರಕವಿ ಜಿಎಸ್ ಶಿವರುದ್ರಪ್ಪ :ಡಾ.ರಮೇಶ ಮೂಲಗೆ

ಕನ್ನಡ ಕಾವ್ಯ ಮತ್ತು ಕಾವ್ಯ ಮೀಮಾಂಸೆಯ ಕ್ಷೇತ್ರಕ್ಕೆ ಜಿ.ಎಸ್.ಎಸ್ ಕೊಡುಗೆ ಅಪಾರ. ಪಾಶ್ಚಾತ್ಯ ಹಾಗೂ ಭಾರತೀಯ ಕಾವ್ಯ ಮೀಮಾಂಸೆ ಕುರಿತ ಅವರ ದೃಷ್ಟಿಕೋನ ಶ್ರೇಷ್ಠಮಟ್ಟದ್ದು ಎಂದು ಮಹಾರಾಷ್ಟ್ರದ ಉದಯಗಿರಿ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ.ರಮೇಶ ಮೂಲಗೆ ಹೇಳಿದರು.

(4ನೇ ಪುಟಕ್ಕೆ)

# ಬಿಜೆಪಿ ವಿರುದ್ಧ ಕಾಂಗ್ರೆಸ್ ದೂರು

**ಬೆಂಗಳೂರು, ಜ.30–** ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ರಾಜ್ಯದ ಇತರ ಸಚಿವರ ವಿರುದ್ಧ "ಅವಹೇಳನಕಾರಿ ವಿಷಯ" ಪೋಸ್ಟ್ ಮಾಡಿದ ಆರೋಪದ ಮೇಲೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಸೈಬರ್ ಪೊಲೀಸ್ ಠಾಣೆಯಲ್ಲಿ ರಾಜ್ಯ ಬಿಜೆಪಿಯ ಎಕ್ಸ್ ಖಾತೆಯ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ಬಿಜೆಪಿ "ಹಗರಣ ಪ್ರಭು" ಎಂಬ ಶೀರ್ಷಿಕೆಯೊಂದಿಗೆ ಸಚಿವರ ಛಾಯಾಚಿತ್ರ ಪೋಸ್ಟ್ ಮಾಡಿದ ಒಂದು ದಿನದ ನಂತರ ಮತ್ತು "ಹಗಲು ರಾತ್ರಿ ರಾಜ್ಯವನ್ನು ಲೂಟಿ ಮಾಡುತ್ತಿರುವ ಹಗರಣ ಸಾಮ್ರಾಜ್ಯ" ಅಸ್ತಿತ್ವದಲ್ಲಿದೆ ಎಂದು ಆರೋಪಿಸಿದ ಹಿನ್ನೆಲೆಯಲ್ಲಿ ಬಿಜೆಪಿ ವಿರುದ್ಧ ಈ ಪ್ರಕರಣ ದಾಖಲಾಗಿದೆ.
"ಹಗರಣ ಪ್ರಭು" ಎಂಬ ಶೀರ್ಷಿಕೆಯೊಂದಿಗೆ ಮಂತ್ರಿಗಳು "ಕರ್ನಾಟಕವನ್ನು ಹಗಲು ರಾತ್ರಿ ಲೂಟಿ ಮಾಡುತ್ತಿರುವ " ಸರ್ಕಾರ ಎಂದು ಆರೋಪಿಸಿದೆ. ಈ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಸೈಬರ್ ಕ್ರೈಮ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದೆ. ದೂರಿನಲ್ಲಿ, ಬಿಜೆಪಿಯ ಎಕ್ಸ್ ಖಾತೆಯು ವ್ಯಕ್ತಿತ್ವ ಹರಣ, ಮತ್ತು ಸಮಾಜದಲ್ಲಿ ಗೊಂದಲ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಲಾಗಿದೆ.
ಪೊಲೀಸರು ದೂರನ್ನು ಸ್ವೀಕರಿಸಿ ಸ್ವೀಕೃತಿ ಪತ್ರ ನೀಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದು ರಾಜ್ಯ ಸರ್ಕಾರದ ಮೇಲೆ ಬಿಜೆಪಿ ಬಹಳ ದಿನಗಳಿಂದ ಭ್ರಷ್ಟಾಚಾರದ ಆರೋಪ ಹೊರಿಸುತ್ತಿದೆ.

ಕಳೆದ ತಿಂಗಳು, ರಾಜ್ಯದಲ್ಲಿ ಶೇ. 63 ರಷ್ಟು ಭ್ರಷ್ಟಾಚಾರ ನಡೆದಿದೆ ಎಂಬ ನ್ಯಾಯಮೂರ್ತಿ ವೀರಪ್ಪ ಅವರ ಹೇಳಿಕೆಯನ್ನು ನೆನಪಿಸಿಕೊಂಡ ಪಕ್ಷ,ಸಿದ್ದರಾಮಯ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. ಯಾವುದೇ ರಾಜ್ಯ ಚುನಾವಣೆಗೆ ಹಣಕಾಸು ಒದಗಿಸಲು ಕಾಂಗ್ರೆಸ್ ಪಕ್ಷಕ್ಕೆ ರಾಜ್ಯ "ಎಟಿಎಂ" ಆಗಿ ಮಾರ್ಪಟ್ಟಿದೆ ಎಂದು ಹೇಳಿದೆ.
ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ, ಹಿಂದಿನ ಬಿಜೆಪಿ ಸರ್ಕಾರದ ವಿರುದ್ಧ ಹೊರಿಸಲಾದ "ಶೇಕಡಾ 40 ಕಮಿಷನ್" ಆರೋಪದ ತನಿಖೆಗಾಗಿ ವಿಶೇಷ ತನಿಖಾ ತಂಡ ರಚಿಸಿದ್ದನ್ನು ನೆನಪಿಸಿಕೊಂಡ ಪಕ್ಷದ ನಾಯಕ ಆರ್. ಅಶೋಕ, "ಸರ್ಕಾರದ ವಿರುದ್ಧ ಶೇ. 63 ರಷ್ಟು ಭ್ರಷ್ಟಾಚಾರ ಆರೋಪದ ನಂತರ ಸರ್ಕಾರ ಯಾವ ತನಿಖೆಗೆ ಆದೇಶಿಸುತ್ತದೆ" ಎಂದಿದ್ದಾರೆ.

ಅಶೋಕ ಅವರ ಆರೋಪವನ್ನು ಸಿದ್ದರಾಮಯ್ಯ ನಿರಾಕರಿಸಿದ್ದರು, ವಿರೋಧ ಪಕ್ಷವು "ಸತ್ಯಗಳನ್ನು ತಿರುಚುತ್ತಿದೆ" ಮತ್ತು ತನ್ನದೇ ಆದ ಹಿಂದಿನ ಅಧಿಕಾರಾವಧಿಯಿಂದ ಆರೋಪವನ್ನು ಬದಲಾಯಿಸಲು ಪ್ರಯತ್ನಿಸುತ್ತಿದೆ ಎಂದು ಹೇಳಿದ್ದರು.

# ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆ ಸಿದ್ಧ



ಧೈರ್ಯದ ದಾರಿ

**ರಾಯಚೂರು ಜ,30–** ರಾಯಚೂರು ಜಿಲ್ಲೆಯಲ್ಲಿ 2026ರ ಫೆಬ್ರವರಿ 05, 06 ಮತ್ತು 07 ರಂದು ಮೂರು ದಿನಗಳ ಕಾಲ ಹಮ್ಮಿಕೊಂಡ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಜ್ಯೋತಿ ರಥಯಾತ್ರೆಯು ಸಿದ್ಧವಾಗಿದೆ.

ಈ ಜ್ಯೋತಿ ರಥಯಾತ್ರೆಯು ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರು, ಕವಿತಾಳ, ದೇವದುರ್ಗ, ಗಬ್ಬೂರ, ಅರಕೇರಾ, ಸಿರವಾರ ಸೇರಿದಂತೆ ರಾಯಚೂರು ಜಿಲ್ಲೆಯಾದ್ಯಂತ ಸಂಚರಿಸಲಿದೆ. ರಾಯಚೂರು ಉತ್ಸವದ ಹಿನ್ನೆಲೆಯಲ್ಲಿ ಹಮ್ಮಿಕೊಂಡ ನಾನಾ ಕಾರ್ಯಕ್ರಮಗಳ ಮಾಹಿತಿಯನ್ನು ಜನತೆಗೆ ಒದಗಿಸುವ ದಿಶೆಯಲ್ಲಿ ಈ ಜ್ಯೋತಿ ರಥಯಾತ್ರೆ ಸಂಚರಿಸಲಿದೆ.

ಜಿಲ್ಲಾಧಿಕಾರಿಗಳ ಮನವಿ: ಈ ಜ್ಯೋತಿ ರಥಯಾತ್ರೆಯು ಫೆ.01ರ ಬೆಳಿಗ್ಗೆ 10 ಗಂಟೆಗೆ ರಾಯಚೂರು ನಗರದ ಕರ್ನಾಟಕ ಸಂಘದಿಂದ ಪ್ರಾರಂಭವಾಗಲಿದ್ದು, ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆ ಸಿಬ್ಬಂದಿಯೊಂದಿಗೆ ತಪ್ಪದೇ ಹಾಜರಾಗಬೇಕು. ಶಾಲಾ-ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥಯಾತ್ರೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮನವಿ ಮಾಡಿದ್ದಾರೆ.

## ಸಿರವಾರ: ರಸ್ತೆಯಲ್ಲಿ ಬಿಡಾಡಿ ದನ ಬಿಟ್ಟರೆ ದಂಡ! ಪಟ್ಟಣ ಪಂಚಾಯತಿಯಿಂದ ವಾಹನದ ಮೂಲಕ ಕಟ್ಟುನಿಟ್ಟಿನ ಎಚ್ಚರಿಕೆ




ಧೈರ್ಯದ ದಾರಿ

**ಸಿರವಾರ,ಜ.30–**ಸಿರವಾರ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಬೀದಾಡಿ ದನಗಳ ಹಾವಳಿ ಮಿತಿಮೀರಿದ್ದು, ಸಾರ್ವಜನಿಕರ ಸುಗಮ ಸಂಚಾರಕ್ಕೆ ಮತ್ತು ಸುರಕ್ಷತೆಗೆ ಧಕ್ಕೆಯಾಗುತ್ತಿದೆ. ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿರುವ ಸಿರವಾರ ಪಟ್ಟಣ ಪಂಚಾಯತ್, ಜಾನುವಾರು ಮಾಲಕರಿಗೆ ಅಂತಿಮ ಎಚ್ಚರಿಕೆ ನೀಡಿದ್ದು, ನಿಯಮ ಉಲ್ಲಂಘಿಸಿದರೆ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸುವುದಾಗಿ ಘೋಷಿಸಿದೆ.

ಪಟ್ಟಣದ ಅಂಬೇಡ್ಕರ್ ವೃತ್ತ, ಮಾರುಕಟ್ಟೆ ಪ್ರದೇಶ ಹಾಗೂ ಪ್ರಮುಖ ರಸ್ತೆಗಳಲ್ಲಿ ದನಗಳು ಗುಂಪು ಗುಂಪಾಗಿ ನಿಲ್ಲುತ್ತಿರುವುದರಿಂದ ಸಂಚಾರ ದಟ್ಟಣೆ: ಬಸ್ ಹಾಗೂ ಇತರೆ ವಾಹನಗಳ ಸಂಚಾರಕ್ಕೆ ಗಂಟೆಗಟ್ಟಲೆ ಅಡ್ಡಿಯಾಗುತ್ತಿದೆ.ಅಪಘಾತದ ಆತಂಕ: ದ್ವಿಚಕ್ರ ವಾಹನ ಸವಾರರು ಅಚಾನಕ್ ಆಗಿ ಅಡ್ಡ ಬರುವ ದನಗಳಿಂದಾಗಿ ಬಿದ್ದು ಗಾಯಗೊಂಡಿರುವ ಘಟನೆಗಳು ಸಂಭವಿಸಿವೆ.ಅಶುಚಿತ್ವ: ಪಟ್ಟಣದ ಸೌಂದರ್ಯೀಕರಣಕ್ಕೆ ದನಗಳ ಮಲಮೂತ್ರ ವಿಸರ್ಜನೆ ಅಡ್ಡಿಯಾಗುತ್ತಿದೆ.

**ಪಂಚಾಯತ್ ಮುಖ್ಯಾಧಿಕಾರಿಗಳ ಕಟ್ಟುನಿಟ್ಟಿನ ಆದೇಶ:** ಸಿರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಮಾಲಕರಿಗೆ ಈ ಕೆಳಗಿನ ಸೂಚನೆಗಳನ್ನು ನೀಡಿದ್ದಾರೆ:

ಜಾನುವಾರುಗಳ ಬಂಧನ: ರಸ್ತೆಯಲ್ಲಿ ಅಡ್ಡಾದಿಡ್ಡಿ ಬಿಟ್ಟಿರುವ ದನಗಳನ್ನು ಪಂಚಾಯತ್ ವತಿಯಿಂದ ಕಾರ್ಯಾಚರಣೆ ನಡೆಸಿ ವಶಕ್ಕೆ ಪಡೆಯಲಾಗುವುದು.

**ದಂಡ ಪ್ರಯೋಗ:** ವಶಪಡಿಸಿಕೊಂಡ ಜಾನುವಾರುಗಳನ್ನು ಮಾಲಕರು ಬಿಡಿಸಿಕೊಳ್ಳಲು ಬಂದರೆ, ಸಾರ್ವಜನಿಕರಿಗೆ ತೊಂದರೆ ನೀಡಿದ್ದಕ್ಕಾಗಿ ಭಾರೀ ಮೊತ್ತದ ದಂಡ ವಿಧಿಸಲಾಗುವುದು.

**ಗೋಶಾಲೆಗೆ ರವಾನೆ:** ವಾರಸುದಾರರು ಇಲ್ಲದ ಅಥವಾ ಮಾಲಕರು ಜವಾಬ್ದಾರಿ ವಹಿಸದ ದನಗಳನ್ನು ನೇರವಾಗಿ ಜಿಲ್ಲಾ ಗೋಶಾಲೆಗಳಿಗೆ ಕಳುಹಿಸಲಾಗುವುದು. ವಾಹನ ಮೂಲಕ ಎಚ್ಚರಿಕೆ ಸಂದೇಶ ಸಾರಿದರು.

**ಕಾನೂನು ಕ್ರಮ:** ನಿರ್ಲಕ್ಷ್ಯ ವಹಿಸುವ ಮಾಲಕರ ಮೇಲೆ ಸಾರ್ವಜನಿಕರ ಆಸ್ತಿಗೆ ಹಾನಿ ಹಾಗೂ ಸುರಕ್ಷತೆಗೆ ಧಕ್ಕೆ ತಂದ ಹಿನ್ನೆಲೆಯಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು.

"ಸಿರವಾರ ಪಟ್ಟಣವನ್ನು ಸುಂದರ ಮತ್ತು ಸುರಕ್ಷಿತವಾಗಿಡುವುದು ನಮ್ಮೆಲ್ಲರ ಜವಾಬ್ದಾರಿ. ಜಾನುವಾರು ಮಾಲಕರು ಕೂಡಲೇ ತಮ್ಮ ದನಗಳನ್ನು ಕೊಟ್ಟಿಗೆಗಳಲ್ಲಿ ಕಟ್ಟಿ ಹಾಕಬೇಕು. ತಪ್ಪಿದಲ್ಲಿ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು."

ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ್ ಸಿರವಾರ.

ಸಾರ್ವಜನಿಕರ ಗಮನಕ್ಕೆ: ಪಟ್ಟಣದ ಸ್ವಚ್ಛತೆ ಮತ್ತು ಸುಗಮ ಸಂಚಾರಕ್ಕೆ ಸಾರ್ವಜನಿಕರು ಹಾಗೂ ಜಾನುವಾರು ಮಾಲಕರು ಪಟ್ಟಣ ಪಂಚಾಯತ್ ಜೊತೆ ಸಹಕರಿಸಬೇಕೆಂದು ಈ ಮೂಲಕ ಕೋರಲಾಗಿದೆ.

## ರಾಯಚೂರು ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಕಡಿವಾಣಕ್ಕೆ ಡಿ.ಸಿ. ನಿತೀಶ್ ಕೆ ಖಡಕ್ ಸೂಚನೆ



ಧೈರ್ಯದ ದಾರಿ

**ರಾಯಚೂರು,ಜ.30–** ದೇವದುರ್ಗ, ಸಿರವಾರ, ಮಾನವಿ, ಸಿಂಧನೂರ ಮತ್ತು ಲಿಂಗಸೂರ ತಾಲೂ ಕು ಸೇರಿದಂತೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ ಅನಧೀಕೃತವಾಗಿ ಮರಳು ಸಾಗಣೆ ಕೂಡಲೇ ನಿಲ್ಲಬೇಕು. ಯಾವುದೇ ಕಡೆಗಳಲ್ಲಿ ರಾಜಾರೋ ಷವಾಗಿ ಮರಳು ಎತ್ತುವುದು ಕಂಡು ಬಂದಲ್ಲಿ ಅದನ್ನು ಸಹಿಸಲಾಗುವುದಿಲ್ಲ. ಅವರು ಎಷ್ಟೇ ಪ್ರಭಾವಿಗಳಾಗಿರಲಿ, ಯಾರೇ ಇರಲಿ ಅಂತವರ ಮೇಲೆ ಮುಲಾಜಿಲ್ಲದೇ ಕ್ರಮ ಜರುಗಿಸಲು ಹಿಂದೆ ಮುಂದೆ ನೋಡುವುದಿಲ್ಲ ಎಂದು ಜಿಲ್ಲಾ ಟಾಸ್ಕ್ಫೋ ರ್ಸ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾ ದ ನಿತೀಶ್ ಕೆ ಅವರು ಕಡಕ್ ಎಚ್ಚರಿಕೆ ನೀಡಿದರು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 30ರಂದು ನಡೆದ ಜಿಲ್ಲಾ ಟಾಸ್ಕ್ಫೋರ್ಸ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾ ರಿಗಳು, ರಾಯಚೂರು ಜಿಲ್ಲೆಯ ದೇವದುರ್ಗ, ಮಾನವಿ ಸೇರಿದಂತೆ ಇನ್ನೀತರ ಕಡೆ ಅನಧೀಕೃತ ಮರಳು ಸಾಗಣೆ ಅವ್ಯಾಹತ ನಡೆಯುತ್ತಿದ್ದು, ಇದಕ್ಕೆ ಬ್ರೇಕ್ ಹಾಕಲು ಅಧಿಕಾರಿಗಳು ಕ್ರಮ ವಹಿಸಬೇಕು ಎನ್ನುವ ವಿಷಯವು ಕೆಡಿಪಿ ಸಭೆ ಮತ್ತು ಇನ್ನಿತರ ಸಭೆಗಳಲ್ಲಿ ಮತ್ತೆ ಮತ್ತೆ ಚರ್ಚೆಗೆ ಬರುತ್ತಿದೆ. ಈ ವಿಷಯವನ್ನು ಜಿಲ್ಲಾಡಳಿತವು ಗಂಭೀರವಾಗಿ ಪರಿಗಣಿಸಿದೆ. ಈ ಲ್ಯಾಂಡ್ ಮಾಫಿಯಾದಲ್ಲಿ ಯಾವುದೇ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗಿ ಯಾಗಕೂಡದು. ಈ ಅಕ್ರಮ ಮರಳು ದಂಧೆಯಲ್ಲಿ ಭಾಗಿಯಾಗಿ, ಅಧಿಕಾರಿಗಳು ಮತ್ತು ಸಿಬ್ಬಂದಿಯು ನೋಡಿಯೂ ನೋಡದಂತೆ ಇದ್ದರೆ, ಅಕ್ರಮ ಮರ ಳು ದಂಧೆಗೆ ಕುಮ್ಮಕ್ಕು ನೀಡಿದರೆ ಸಹಾಯಕ ಆಯುಕ್ತರು, ಪೊಲೀಸ್ ಉಪಾಧೀಕ್ಷಕರು, ತಹಸೀ ಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವ ಹಣಾಧಿಕಾರಿಗಳು, ಪಿಡಿಓ ಯಾರೇ ಇರಲಿ ಅಂತಹ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಅಮಾನತು ಗೊಳಿಸಲು ಕೂಡಲೇ ಶಿಫಾರಸ್ಸು

2ನೇಪುಟಕ್ಕೆ►

## ಶ್ರೀ ಜಗದ್ಗುರು ಮೌನೇಶ್ವರ 40 ನೇ ವರ್ಷದ ವೈಭವದ ಜಾತ್ರಾ ಮಹೋತ್ಸವ

ಧೈರ್ಯದ ದಾರಿ

**ಮಾನ್ವಿ,ರಿ.30–**ತಾಲೂಕಿನ ಉಮಳಿ ಹೋಸುರು ಗ್ರಾಮದಲ್ಲಿನ ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನದಲ್ಲಿ 40 ನೇ ವರ್ಷದ ಜಾತ್ರಾ ಮಹೋತ್ಸವ ಅಂಗವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪುರವಂತರ ಸೇವೆ , ಪಲ್ಲಕ್ಕಿ ಉತ್ಸಾವ ನಡೆಯಿತು, ಗ್ರಾಮಸ್ಥರು ಕಾತರಿಕಿ ಮೌನೇಶ್ವರ ಮಠದ ಶ್ರೀ ಅಯ್ಯಪ್ಪ ತಾತನವರ ಸಾನಿಧ್ಯದಲ್ಲಿ ಶ್ರೀ ಜಗದ್ಗುರು ಮೌನೇಶ್ವರ ಉಚ್ಚಾಯ ಮಹೋತ್ಸವವನ್ನು ವೈಭವದಿಂದ ಭಕ್ತಿ ಭಾವದಿಂದ ನೆರವೇರಿಸಿದರು.

ಜಾತ್ರಾ ಮಹೋತ್ಸವ ಅಂಗವಾಗಿ ನಡೆದ ಗ್ರಾಮೀಣ ಭಾಗದ ರೈತರ ದೇಸಿ ಕ್ರೀಡೆಯಾದ ಗಿರ್ಕಿ ಬಂಡಿ ಓಟದ ಸ್ಪರ್ಧೆ ಹಾಗೂ ಕಬ್ಬಡಿ ಪಂದ್ಯಾವಳಿಗಳಿಗೆ ಸುವರ್ಣಗಿರಿ ಅಡವಿ ಅಮರೇಶ್ವರ ಮಠದ ಶ್ರೀ ತೋಂಟದಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಆಶೀರ್ವಾಚನ ನೀಡಿ ಇಂದಿನ ದಿನಗಳಲ್ಲಿ ರೈತರ ಅವಿಭಾಜ್ಯ ಅಂಗವೇಂದೆ ಪರಗಣಿಸಲಾಗುವ ಎತ್ತುಗಳೊಂದಿಗೆ ರೈತರು ಗಿರ್ಕಿ ಬಂಡಿ ಓಟದಲ್ಲಿ ಭಾಗವಹಿಸುವ ಮೂಲಕ ನಮ್ಮ ಅಪ್ಪಟ ಗ್ರಾಮೀಣ ಕ್ರೀಡೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಕಾರ್ಯವನ್ನು ಮಾಡುತ್ತಿದ್ದಾರೆ ಇಂತಹ ಗ್ರಾಮೀಣ ಕ್ರೀಡೆಗಳನ್ನು ಹೆಚ್ಚು ಹೆಚ್ಚು ನಡೆಸುವ ಮೂಲಕ ಅವುಗಳನ್ನು ಉಳಿಸಿಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಗಿರ್ಕಿ ಬಂಡಿ ಓಟದ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿ ರೈತ ಅರುಣ್ ಕುಮಾರ್ ನವಲಕಲ್ ರವರ ಎತ್ತುಗಳು ಪ್ರಥಮ ಸ್ಥಾನ ಪಡೆದು 20 ಸಾವಿರ, ರೈತ ಹನುಮೇಶ ಬೆಟ್ಟದೂರು ರವರ ಎತ್ತುಗಳು ದ್ವಿತೀಯ ಸ್ಥಾನ ಪಡೆದು10 ಸಾವಿರ , ರೈತ ಹನುಮಯ್ಯ ನೀರಮಾನವಿ ರವರ ಎತ್ತುಗಳು ತೃತೀಯ ಸ್ಥಾನ ಪಡೆದು ಆರು



ಸಾವಿರ, ಬಹುಮಾನ 6ಸಾವಿರ ರೂ. ರೈತ ದದ್ದಲ್ ಸಣ್ಣ ವಿರೇಶ್ ರವರ ಎತ್ತುಗಳು ನಾಲ್ಕನೇ ಸ್ಥಾನ ಪಡೆಯುವ ಮೂಲಕ 4 ಸಾವಿರ ನಗದು ಬಹುಮಾನಗಳನ್ನು ಪಡೆದುಕೊಂಡರು. ಬಹುಮಾನಗಳನ್ನು ಪಂಪಣ್ಣ ಮ್ಯಾಕ್ಕಲ್, ಶರಣಪ್ಪ ಗೌಡ ಮಾಲಿ ಪಾಟೀಲ್ , ಮಹೇಂದ್ರ ನಾಯಕ್ ಮ್ಯಾಕಲ್ ,ಶಶಿಕುಮಾರ್ ಹೀರೆಮಠ ವಿತರಿಸಿದರು. ಗ್ರಾಮದ ಶ್ರೀ ಸಿದ್ದೇಶ್ವರ ದೇವಸ್ಥಾನದ ಜಮೀನಿನಲ್ಲಿ ನಡೆದ ಓಪನ್ ಮ್ಯಾಟ್ ಕಬ್ಬಡಿ ಪಂದ್ಯಾವಳಿಯಲ್ಲಿ ಬಾಗಲವಾಡ ತಂಡ ಪ್ರಥಮ. ಉಮಳಿಹೊಸುರು ತಂಡ ದ್ವೀತಿಯ, ಕೊರವಿ ತಂಡ ತೃತೀಯ ಸ್ಥಾನವನ್ನು ಪಡೆದುಕೊಂಡರು. ಕಬ್ಬಡಿ ಪಂದ್ಯಾವಳಿಯಲ್ಲಿ ವಿಜೇತರಾದ ತಂಡಗಳಿಗೆ ಶರಣಪ್ಪ ಗೌಡ ಮಾಲಿ ಪಾಟೀಲ್ ,ಲಚ್ಚುಮಯ್ಯ ನಾಯಕ ಗೊಬ್ಬರಕಲ್,ಅಂಬಣ್ಣ ನಾಯಕ ಬೇನೂರು ಬಹುಮಾನಗಳನ್ನು ವಿತರಿಸಿದರು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಗಿರ್ಕಿ ಬಂಡಿ ಓಟದ ಸ್ಪರ್ಧೆ ಹಾಗೂ ಕಬ್ಬಡಿ ಪಂದ್ಯಾವಳಿಗಳನ್ನು ವಿಕ್ಷೀಸುವುದಕ್ಕಾಗಿ ಉಮಳಿ ಹೋಸುರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು,ಗ್ರಾಮಸ್ಥಾರು ಆಗಮಿಸಿದರು.

ಮೊದಲನೇ ಪುಟದಿಂದ

# ರಾಯಚೂರು ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಕಡಿವಾಣಕ್ಕೆ ಡಿ.ಸಿ. ನಿತೀಶ್ ಕೆ ಖಡಕ್ ಸೂಚನೆ

ಮಾಡಲಾಗುವುದು. ಪ್ರಕರಣವು ಗಂಭೀರವಾಗಿದ್ದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಮೇಲೆಯೇ ಎಫ್ಐಆರ್ ದಾಖಲಿ ಸಿ ಶಾಶ್ವತವಾಗಿ ಮನೆಗೆ ಕಳುಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

**ವಿಶೇಷ ಕಾರ್ಯಾಚರಣೆಗೆ ಸೂಚನೆ:** ಅಕ್ರಮ ಮರಳು ಸಾಗಣೆಗೆ ಬ್ರೇಕ್ ಹಾಕಬೇಕು ಎಂಬುದು ದೇವದುರ್ಗ ಸಿಟಿ ಜನರು ಹಾಗೂ ಆ ತಾಲೂಕಿನ 48 ಹಳ್ಳಿಗಳ ಒಕ್ಕೋರಲಿನ ಮನವಿ ಮತ್ತು ಒತ್ತಾಯವಾಗಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡವಾಗಿ ದೇವದುರ್ಗ ತಾಲೂಕಿನಲ್ಲಿ ವಾರಗಳ ಕಾಲ ವಿಶೇಷ ಕಾರ್ಯಾಚರಣೆಗಿಳಿಯಬೇಕು. ದೇವದುರ್ಗ ಮತ್ತು ಮಾನವಿಯಲ್ಲಿ ಆರ್‌ಟಿಓ ಅಧಿಕಾರಿಗಳು ವಿಶೇಷ ಡ್ರೈವ್ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

**ಪೊಲೀಸ್ ರಕ್ಷಣೆಗೆ ಪಡೆದುಕೊಳ್ಳಿ:** ನೇಮ್ ಪ್ಲೇಟ್ ಇಲ್ಲದೇ ಮಣ್ಣು ತುಂಬಿಕೊಂಡು ಓಡಾಡುವ ಟಿಪ್ಪರ್, ಟ್ರಾಕ್ಟರ್‌ಗಳ ಮೇಲೆ ಕಣ್ಣಿಟ್ಟು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ದಾಳಿ ನಡೆಸಿ ಅಂತಹ ವಾಹನಗಳನ್ನು ಸೀಜ್ ಮಾಡಬೇಕು. ಹೇವಿ ಪೆನಾಲ್ಟಿ ಹಾಕಿ ಬಿಸಿ ಮುಟ್ಟಿಸಬೇಕು, ಸೀಜ್ ಮಾಡಿ ಸುಮ್ಮನೆ ಬಿಡಬಾರದು ಎಂದು ಜಿಲ್ಲಾಧಿಕಾ ರಿಗಳು ಸೂಚನೆ ನೀಡಿದರು.

**ಚೆಕ್‌ಪೋಸ್ಟ್ ಸ್ಥಾಪನೆಗೆ ಸೂಚನೆ:** ಜಾಲಹಳ್ಳಿ, ಗಬ್ಬೂರ ಸೇರಿದಂತೆ ದೇವದುರ್ಗ, ಸಿರವಾರ, ಲಿಂಗಸೂರು, ಮಾನವಿ, ಸಿಂಧನೂರ ತಾಲೂಕಿನ ವಿವಿಧೆಡೆ ಕೂಡಲೇ ಚೆಕ್‌ಪೋಸ್ಟ್ ಸ್ಥಾಪನೆಗೆ ಕ್ರಮವಹಿಸಿ ಅಕ್ರಮ ಮರಳು ಸಾಗಣೆ ತಡೆಯಬೇಕು. ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಗೃಹರಕ್ಷಕ ದಳದ ಸಿಬ್ಬಂದಿ ಸೇರಿ ಒಟ್ಟು ಮೂರು ತಂಡಗಳಾಗಿ ಚೆಕ್‌ಪೋಸ್ಟನಲ್ಲಿ ನಿಗಾ ಇಡಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿಯಿಂ ದಲೇ ಯಾವುದೇ ಮೇಸೇಜ್ ಪಾಸಾಗದಂತೆ ಜಾಗರೂಕರೆವಹಿಸಿ ಬೇರೆ ಬೇರೆ ಭಾಗದ ಅಧಿಕಾರಿ ಗಳು ಮತ್ತು ಸಿಬ್ಬಂದಿಯನ್ನು ಚೆಕ್‌ಪೋಸ್ಟಗಳಿಗೆ ನಿಯೋಜನೆ ಮಾಡಬೇಕು. ಬೇರೆ ಬೇರೆ ಇಲಾಖೆಗಳಲ್ಲಿನ ಎಫ್‌ಡಿಎ, ಎಸ್‌ಡಿಎ ಸೇರಿದಂತೆ ಇನ್ನಿತರ ಸಿಬ್ಬಂದಿಯನ್ನು

ಕಾರ್ಯಾಚರಣೆ ನಡೆಸುವ ಸಮಿತಿಗೆ ಸೇರಿಸಿಕೊಂಡು ಅವರಿಗೆ ಜವಾಬ್ದಾರಿ ಹಂಚಿಕೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ಸಿಸಿ ಟಿವಿ ಅಳವಡಿಕೆಗೆ ಸೂಚನೆ:** ಬೇರೆ ಬೇರೆ ಕಡೆಗಳಲ್ಲಿ ಸಿಸಿ ಟಿವಿ ಅಳವಡಿಸಿ ಅವರು ಕಾರ್ಯ ನಿರ್ವಹಿಸುವಂತೆ ನೋಡಿ ನಿಗಾ ವಹಿಸಬೇಕು. ಸಿಟಿ ಟಿವಿ ರೆಕಾರ್ಡ್ ಇಟ್ಟುಕೊಳ್ಳಬೇಕು. ಸಿಸಿಟಿವಿ ಅಳವಡಿಸಿಲ್ಲ ಎಂದು ಯಾವುದೇ ಕಾರಣಕ್ಕೂ ಸಬೂಬು ಹೇಳುವಂತಿಲ್ಲ ಎಂದು ಜಿಲ್ಲಾಧಿಕಾರಿಗಳು, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

**ಸೀಜ್ ಮಾಡಿದ ಸ್ಯಾಂಡ್ ವಿಲೆಗೆ ಸೂಚನೆ:** ಜಿಲ್ಲೆಯಲ್ಲಿ ಕೆಕೆಆರ್‌ಡಿಬಿಯಿಂದ ವಿವಿಧ ಕಾಮಗಾರಿಗಳು ನಡೆಯುತ್ತಿವೆ. ಜಲಧಾರೆಯ ದೊಡ್ಡ ಪ್ರೊಜೆಕ್ಟ್ ಅನುಷ್ಠಾನವಾಗುತ್ತಿದೆ. ನಿರ್ಮಿತಿ ಕೇಂದ್ರದಿಂದಲೂ ಕೆಲವು ಕಾಮಗಾರಿಗಳು ಚಾಲ್ತಿಯಲ್ಲಿವೆ. ಇಂತಹ ಕಾಮಗಾರಿಗಳಿಗೆ ಮಣ್ಣು ಬೇಕಾಗುತ್ತದೆ. ಇದುವೆರೆಗೆ ಜಪ್ತಿ ಮಾಡಿದ ಮಣ್ದಿಗೆ ನಿಯಮಾನುಸಾರ ಇ ಹರಾಜು ಪ್ರಕ್ರಿಯೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಯುಕ್ತರು, ತಹಸೀಲ್ದಾರಗೆ ಸೂಚನೆ: ಸಹಾಯಕ ಆಯುಕ್ತರು ಮತ್ತು ತಹಸೀಲ್ದಾರರು ಅಕ್ರಮ ಮರಳು ಸಾಗಣೆ ಪ್ರಕರಣಗಳ ಬಗ್ಗೆ ವಿಶೇಷ ನಿಗಾವಹಿಸಬೇಕು. ತಮ್ಮ ಹಂತದಲ್ಲಿ ತಂಡಗಳನ್ನು ರಚಿಸಿಕೊಂಡು ಆಯಾ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಯಾವ ಕಡೆಗೆ ಎಷ್ಟು ದಾಳಿ ಮಾಡಿದ್ದೀರಿ ಎಂಬುದರ ಬಗ್ಗೆ ಟಾರ್ಗೆಟ್ ನೀಡಬೇಕು. ತಮ್ಮ ಹಂತದಲ್ಲಿ ದಾಳಿ ನಡೆಸಿ ಜೆಸಿಬಿ, ಟಿಪ್ಪರ್, ಟ್ರಾಕ್ಟರ್ ಸೀಜ್ ಮಾಡಿ ಬಿಸಿಮುಟ್ಟಿಸಬೇಕು ಎಂದು ಸೂಚನೆ ನೀಡಿದರು.

**ಆರ್‌ಟಿಓ ಅಧಿಕಾರಿಗಳಿಗೆ ಸೂಚನೆ:** ತಂಡವಾಗಿ ಕೆಲಸ ಮಾಡಿ: ಪೊಲೀಸ್ ಸೇರಿದಂತೆ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ತಂಡವಾಗಿ ಕೆಲಸ ಮಾಡಬೇಕು. ರಾತ್ರಿ 9 ಗಂಟೆಯಿಂದ ಬೆಳಗಿನ 7 ಗಂಟೆವರೆಗಿನ ಅವಧಿಯಲ್ಲಿ ವಿಶೇಷ ನಿಗಾವಹಿಸಬೇಕು. ಒಂದೇ ವಾಹನಕ್ಕೆ ಅನುಮತಿ ಪಡೆದು ಒಂದೇ ನೇಮ್ ಪ್ಲೇಟ್ ಮೇಲೆ ನಾಲ್ಕಾರು ಗಾಡಿ ಓಡಿಸುವ ಜಾಲದ ಬಗ್ಗೆ ಗಮನ ಹರಿಸಬೇಕು ಎಂದು ಇದೆ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ದೂರುಗಳ ದಾಖಲಿಸಿ:** ಜಿಲ್ಲಾ ಪಂಚಾಯತ್ ಸಿಇಓ ಈಶ್ವರ್ ಕಾಂದೂ ಅವರು ಮಾತನಾಡಿ, ಉಪಖನಿಜ ಸಾಗಣೆ ವಾಹನಗಳಿಗೆ ಜಿಪಿಎಸ್ ಅಳವಡಿಸುವುದು ಕಡ್ಡಾಯವಾಗಿರುತ್ತದೆ. ಜಿಲ್ಲೆಯಲ್ಲಿ ಹಲವಾರು ವಾಹನಗಳಿಗೆ ಪರವಾನಿಗೆ ಇಲ್ಲದೇ, ನಂಬರ್ ಪ್ಲೇಟ್ ಇಲ್ಲದೇ ಹಾಗೂ ಜಿಪಿಎಸ್ ನೋಂದಣಿ ಇಲ್ಲದೇ ಅನಧೀಕೃತವಾಗಿ ಉಪ ಖನಿಜ ಸಾಗಣೆ ಮಾಡುವ ಬಗ್ಗೆ ದೂರುಗಳನ್ನು ದಾಖಲಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಡಾ.ಹಂಪಣ್ಣ ಸಜ್ಜನ, ದೇವದುರ್ಗ, ಲಿಂಗಸೂರು, ಅರಕೇರಾ, ಸಿರವಾರ, ಮಸ್ಕಿ, ಸಿಂಧನೂರ ಮತ್ತು ಮಾನ್ವಿ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು. ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಾದ ಮುತ್ತಣ್ಣ ಅವರು ಸಭೆಗೆ ಇಲಾಖೆಯ ಗುರಿ ಸಾಧನೆಗಳ ಬಗ್ಗೆ ಮಾಹಿತಿ ನೀಡಿದರು.

# ರಾಯಚೂರು ಉತ್ಸವದ ಕರಪತ್ರಗಳನ್ನು ಮನೆಮನೆಗೆ ತಲುಪಿಸಿ ಪ್ರಚಾರ ನೀಡಲು ಡಿಹೆಚ್ಓ ಡಾ.ಸುರೇಂದ್ರ ಬಾಬು ಸೂಚನೆ



ಧೈರ್ಯದ ದಾರಿ

**ರಾಯಚೂರು ಜ,30–** ಜಿಲ್ಲೆಯಲ್ಲಿ ಫೆ.05 ರಿಂದ ಫೆ.07ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ಕಾರ್ಯಕ್ರಮದ ಕುರಿತು ವ್ಯಾಪಕ ಪ್ರಚಾರ ನಡೆಸಬೇಕಿದೆ. ಈ ಕಾರ್ಯಕ್ರಮದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ದಿಶೆಯಲ್ಲಿ ಆರೋಗ್ಯ ಇಲಾಖೆಯ ಕ್ಷೇತ್ರ ಸಿಬ್ಬಂದಿಯು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಮನೆಮನೆಗೆ ತೆರಳಿ ಉತ್ಸವದ ಕರಪತ್ರ ನೀಡಿ ಮಾಹಿತಿ ನೀಡುವಂತೆ ಉತ್ಸವದ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ಸಮನ್ವಯಾಧಿಕಾರಿ ಆಗಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ಹೇಳಿದರು.

ಜನವರಿ 29ರ ಗುರುವಾರ ನಗರ ಡಿಹೆಚ್ಓ ಕಚೇರಿಯಲ್ಲಿ ಜಿಲ್ಲೆಯ ತಾಲೂಕು ಆರೋಗ್ಯಾಧಿಕಾರಿಗಳು ಹಗೂ ವೈದ್ಯಾಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐತಿಹಾಸಿಕ ನಾಡು ರಾಯಚೂರಿನಲ್ಲಿ ಬಹುದಿನಗಳ ನಂತರ ಜರುಗುತ್ತಿರುವ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ ಕಾರ್ಯಕ್ರಮವು ಮೂರು ದಿನಗಳ ಕಾಲ ನಡೆಯಲಿದ್ದು, ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು ಮೇಲಿಂದ ಮೇಲೆ ಸಭೆ ನಡೆಸಿ ಸಿದ್ಧತೆಗೆ ಸೂಚನೆ ನೀಡಿದ್ದಾರೆ. ಜನರ ಉತ್ಸವವನ್ನು ಇಮ್ಮಡಿಗೊಳಿಸುವ ದಿಶೆಯುಲ್ಲಿ ಹಮ್ಮಿಕೊಂಡ ಎಲ್ಲ ಕಾರ್ಯಕ್ರಮಗಳಲ್ಲಿ ಜನರು ತಪ್ಪದೇ ಭಾಗಿಯಾಗಬೇಕು. ಈ ದಿಶೆಯಲ್ಲಿ ಜಿಲ್ಲೆಯ ಪ್ರತಿಯೊಂದು ಗ್ರಾಮಗಳಲ್ಲಿ ಪ್ರಚಾರ ಕಾರ್ಯವನ್ನು ಅಚ್ಚುಕಟ್ಟಾಗಿ ನಡೆಸಲು ಸೂಚನೆ ನೀಡಿದರು.

ಜನತೆಗೆ ಪ್ರೇರೇಪಣೆಗಾಗಿ ಈಗಾಗಲೇ ದೇಸಿ ಕ್ರೀಡೆ, ಮ್ಯಾರಾಥಾನ್, ಸೈಕ್ಲಿಂಗ್, ದೇಹದಾರ್ಢ್ಯ ಸ್ಪರ್ಧೆಗಳನ್ನು ಏರ್ಪಡಿಸಿ ಉತ್ಸವದ ಕಳೆ ಹೆಚ್ಚಿಸಲಾಗಿದೆ. ಅದರಂತೆ ಇನ್ಮುಂದೆಯು ಸಹ ಬೇರೆ ಬೇರೆ ಕಾರ್ಯಕ್ರಮಗಳಿವೆ. ಮಕ್ಕಳ ಉತ್ಸವ, ಆಹಾರ ಮೇಳ, ಗ್ಯಾರಂಟಿ ಮೇಳ, ಹೆಲಿಕ್ಯಾಪ್ಟರ್ ಮೂಲಕ ರಾಯಚೂರು ಹಾಗೂ ಸುತ್ತಲಿನ ಸ್ಥಳ ವೀಕ್ಷಣೆ, ಹೆಸರಾಂತ ಕಲಾವಿದರು, ನೃತ್ಯಪಟುಗಳಿಂದ ಪ್ರತಿದಿನ ಕೃಷಿ ವಿಶ್ವವಿದ್ಯಾಲಯದ ಆವರಣ, ಜಿಲ್ಲಾ ರಂಗಮಂದಿರ, ಮಹಿಳಾ ಸಮಾಜದ ಗ್ರೌಂಡ್, ವಾಲ್ಕಟ್ ಮೈದಾನ, ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುತ್ತವೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದೀತಾ ಎಮ್.ಎನ್., ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್ ಕೆ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ತಾಲೂಕು ಆರೋಗ್ಯಾಧಿಕಾರಿ ಡಾ.ಅಮೃತ್ ಹುಕ್ಕೇರಿ, ಡಿಹೆಚ್ಇಓ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್ಇಓ ಬಸಯ್ಯ, ಡಿಪಿಎಮ್ ನವೀನ್ ಕುಮಾರ್, ಹೆಚ್ಐಓ ಸುರೇಶ್, ನಾಗರಾಜ್, ಜ್ಯೋತಿ, ಭಾರತಿ ಸೇರಿದಂತೆ ಇತರರು ಇದ್ದರು.

ಆರೋಗ್ಯ ಇಲಾಖೆಯಿಂದ ಕಾರ್ಯಕ್ರಮ: ಜಾಲಹಳ್ಳಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಿಗೆ ರಾಯಚೂರು ಉತ್ಸವದ ಕುರಿತು ಮಾಹಿತಿ ನೀಡಲಾಯಿತು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆ



ಧೈರ್ಯದ ದಾರಿ

**ಲಿಂಗಸುಗೂರು,ಜ.30–**ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆಯ ಪ್ರಯುಕ್ತ ನ್ಯಾಯಾಲಯದ ಸಂಕೀರ್ಣ ಮತ್ತು ವಕೀಲರ ಭವನ ಸುತ್ತಮೂತ್ತ ಸ್ವಚ್ಛ ಮಾಡಲಾಯಿತು.

ನ್ಯಾಯಧೀಶರು ಉಂಡಿ ಮಂಜುಳಾ ಶಿವಪ್ಪ ಮಾತನಾಡಿ,

ಮಹಾತ್ಮ ಗಾಂಧಿ ಕಂಡ ಸ್ವಚ್ಛ ಭಾರತದ ಕನಸು ನನಸು ಮಾಡಲು ಪ್ರತಿಯೊಬ್ಬ ನಾಗರೀಕನು ಮುಂದಾಗಬೇಕಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಭೂಪನಗೌಡ ಪಾಟೀಲ್, ಪುರಸಭೆ ಮುಖ್ಯಾಧಿಕಾರಿ ನಟರಾಜ, ಬಸಲಿಂಗಪ್ಪ ವಕೀಲರು, ಬಾಲರಾಜ ಸಾಗರ ಮಾನಮಟ್ಟಿ ವಕೀಲರು, ದೇವೆಂದ್ರ ನಾಯಕ ವಕೀಲರು, ಹನುಮಂತ ರೆಡ್ಡಿ ವಕೀಲರು, ಹಾಗೂ ಪುರಸಭೆ ಅಧಿಕಾರಿಗಳು, ಸಿಬ್ಬಂದಿಗಳು, ಸ್ವಚ್ಛತಾ ಸಿಬ್ಬಂದಿಗಳು, ನ್ಯಾಯಾಲಯದ ಎಲ್ಲ ಸಿಬ್ಬಂದಿಗಳು ಹಾಗೂ ವಕೀಲರು ಭಾಗವಹಿಸಿದ್ದರು.

# ಹೈನುಗಾರಿಕೆ ನಿರಂತರ (ನಿಖರ) ಆದಾಯದ ಮೂಲವಾಗಿದೆ: ಅಮರೇಶ ಯಾದವ್



ಧೈರ್ಯದ ದಾರಿ

**ಮಸ್ಕಿ ಜ 29 –** ಹೈನುಗಾರಿಕೆ ನಿರಂತರ (ನಿಖರ) ಆದಾಯದ ಮೂಲವಾಗಿದೆ. ಅದಕ್ಕಾಗಿ ಮಹಿಳೆಯರು ಹಾಲಿನ ಸಂಘಗಳನ್ನು ಸ್ಥಾಪಿಸಿಕೊಂಡು ಆರ್ಥಿಕ ಸ್ವಾವಲಂಬನೆ ಹೊಂದಬೇಕಾಗಿದೆ. ಸಬ್ಸಿಡಿ ದರದಲ್ಲಿ ದೊರೆಯುವ ಉತ್ತಮ ತಳಿಯ ರಾಸುಗಳನ್ನು ಖರೀದಿಸಿ ಅವುಗಳ ಆರೋಗ್ಯ ಮತ್ತು ಆಹಾರದ ಬಗ್ಗೆ ಕಾಳಜಿವಹಿಸುವಂತೆ ತಿಳಿಸಿ, ವೈಜ್ಞಾನಿಕ ಆಹಾರ ಪದ್ದತಿ ಅನುಸರಿಸಿ ಸರಕಾರದಿಂದ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿಸಿ ಅಧಿಕ ಹಾಲು ಉತ್ಪಾದನೆಯ ಗುರಿ ಹೊಂದುವಂತೆ ಮಸ್ಕಿ ತಾಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಅಮರೇಶ ಯಾದವ ತಿಳಿಸಿದರು

ಅವರು ಮಸ್ಕಿ ತಾಲೂಕು ಪಂಚಾಯತ್ ಕಛೇರಿ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ರಾಯಚೂರು–ಬಳ್ಳಾರಿ–ಕೊಪ್ಪಳ–ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ರಾಯಚೂರು–ಕೊಪ್ಪಳ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಮಸ್ಕಿ ಶಾಖೆ, ಸಹಕಾರ ಇಲಾಖೆ, ತಾಲೂಕು ಪಂಚಾಯತ್ ಮಸ್ಕಿ ಹಾಗೂ ಮಸ್ಕಿ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳು ಇವರುಗಳ ಸಂಯುಕ್ತ ಆಶ್ರಯದಲ್ಲಿ ಮಸ್ಕಿ ತಾಲೂಕಿನ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಏರ್ಪಡಿಸಿದ ವಿಶೇಷ ಕಾರ್ಯಕ್ರಮ ಉದ್ಘಾಸಿ ಮಾತನಾಡಿದರುಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕ ಶಶಿಧರ ಪಾಟೀಲ ಇವರ ಅನುಪಸ್ಥಿತಿಯಲ್ಲಿ ಕೆ.ಎಂ.ಎಫ್ ಹಾಲು ಒಕ್ಕೂಟದ ನಿರ್ದೇಶಕ ಅಮರಗುಂಡಪ್ಪ ವಹಿಸಿ ಸಹಕಾರ ಪಿತಾಮಹ ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿ ತಾಲೂಕಿನ ಪ್ರತಿ ಗ್ರಾಮದಲ್ಲಿ ನೂತನ ಹಾಲಿನ ಸಂಘಗಳಿಂದ ಮುಂದಿನ ದಿನಗಳಲ್ಲಿ ಪ್ರತಿ ದಿನ 50 ಸಾವಿರ ಲೀಟರ್ ಹಾಲು ಉತ್ಪಾದನೆಯ ಗುರಿ ಹೊಂದಿರುವ ಬಗ್ಗೆ ತಿಳಿಸಿ, ಇದಕ್ಕೆ ಬೇಕಾದ ಪಶು ಆಹಾರವನ್ನು ಸಬ್ಸಿಡಿ ದರದಲ್ಲಿ ಕೆ.ಎಂ.ಎಫ್. ಒಕ್ಕೂಟದಿಂದ ಒದಗಿಸುವುದಾಗಿ ತಿಳಿಸಿದರು.

ಮಸ್ಕಿ ತಾಲೂಕು ಪಂಚಾಯತ್ ಸಹಾಯಕ ನಇರ್ದೇಶಕ ಸೋಮನಗೌಡ ಪಾಟೀಲ ಮಾತನಾಡಿ ತಾಲೂಕು ಪಂಚಾಯತಿಯಿಂದ ಸಹಕಾರ ಸಂಘಗಳಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿಸಿ, ಕೇವಲ ಸಬ್ಸಿಡಿ ಪಡೆಯುವ ಉದ್ದೇಶದಿ ಂದ ಸಂಘಗಳನ್ನು ರಚಿಸಿಕೊಳ್ಳಬೇಡಿ, ತಮ್ಮ ಭವಿಷ್ಯದ ಆರ್ಥಿಕತ 'ಯ ಅನುಕೂಲಕ್ಕಾಗಿ ಸ್ಥಾಪಿಸಿಕೊಳ್ಳುವಂತೆ ಸಲಹೆ ನೀಡಿದರು. ಡಾ॥ ಮಲ್ಲಿಕಾರ್ಜುನ ಹೆಚ್ಚ ಕಮತಗಿ ಸಹಕಾರ ಇಲಾಖೆ (ಎ.ಆರ್.ಸಿ.ಎಸ್. ಕಛೇರಿ) ಸಿಂಧನೂರು ಇವರು ಸಹಕಾರ ಕ್ಷೇತ್ರ ಬೆಳೆದು ಬಂದ ದಾರಿ, ಕೃಷಿಯಲ್ಲಿ ಉಪಕಸಬುಗಳ ಅಳವಡಿಕೆ, ಉದ್ಯೋಗ

# ಪೇಪರ್‌ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆ ತರಬೇತಿ

**ರಾಯಚೂರು ಜ,30–** ಪೇಪರ್‌ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯನ್ನು ಜಿಲ್ಲೆಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಯಚೂರಿನ ಉಪ ನೋಂದಣೆ ಕಚೇರಿಯಲ್ಲಿ ಪೇಪರ್‌ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯ ಕುರಿತು ತರಬೇತಿಯನ್ನು ಜನವರಿ 31ರ ಮಧ್ಯಾಹ್ನ 3 ಗಂಟೆಗೆ ಹಮಿಕೊಳ್ಳಲಾಗಿದ್ದು, ತರಬೇತಿಯ ಸದುಪಯೋಗವನ್ನು ಸಾರ್ವಜನಿಕರು ಪಡೆಯಬಹುದಾಗಿದೆ. ಸಂಬಂಧಪಟ್ಟ ದಸ್ತಾವೇಜು ಬರಹಗಾರರು, ವಕೀಲರು, ಕರ್ನಾಟಕ ಒನ್, ರಾಯಚೂರು ಒನ್, ಗ್ರಾಮ ಒನ್, ಮತ್ತು ಬಾಪೂಜಿ ಸೇವಾ ಕೇಂದ್ರ ವರ್ಗದವರು ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯರಮರಸ್ ಆದರ್ಶ ವಿದ್ಯಾಲಯದಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು ಜ,30–** ತಾಲೂಕಿನ ಯರಮರಸಿನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026–27ನೇ ಶೈಕ್ಷಣಿಕ ಸಾಲಿನಲ್ಲಿ 6ನೇ ತರಗತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆಂದು ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಈರಣ್ಣ ಗೋಸಗಿ ಅವರು ತಿಳಿಸಿದ್ದಾರೆ.ಪ್ರಸ್ತುತ 2025–26ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರು ಇದ್ದು, ಅರ್ಜಿಯನ್ನು ಫೆ.25ರೊಳಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ: www.schooleducation.karnataka.gov.in ಅಥವಾ www.vidyavahini.karnataka.gov.in ನಲ್ಲಿಉಚಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಅವಕಾಶವನ್ನು ಪಾಲಕರು ಇದರ ಸದುಪಯೋಗ ಪಡಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ಸಹಾಯವಾಣಿ ಸಂಖ್ಯೆ: 9481087977ಗೆ ಸಂಪರ್ಕ ಮಾಡಬಹುದಾಗಿದೆ ರಾಯಚೂರಿನ ಕ್ಷೇತ್ರಾ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಸರ್ವೋದಯ ದಿನ ಆಚರಣೆ

ಧೈರ್ಯದ ದಾರಿ

**ಮಾನ್ವಿ,ಜ.30–** ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರು ಹುತಾತ್ಮರಾದ ದಿನವನ್ನು ಸರ್ವೋದಯ ದಿನ ರಾಷ್ಟ್ರೀಯ ಹುತಾತ್ಮರ ದಿನ ಎಂದು ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಆಚರಿಸಲಾಯಿತು. ಶಾಲಾ ಕಾರ್ಯದರ್ಶಿ ಸೈಯದ್ ಮುಜಾತಾಬ ಖಾದ್ರಿ, ಮುಖ್ಯ ಗುರು ನಾಗರತ್ನ ದೇಸಾಯಿ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು, ಸ್ಕೌಟ್ ಗೈಡ್ ವಿದ್ಯಾರ್ಥಿಗಳು ಮಹಾತ್ಮ ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಕ ನರಸಿಂಹ 'ಮೂರ್ತಿ ದೇಸಾಯಿ ವಿದ್ಯಾರ್ಥಿಗಳಿಗೆ ಗಾಂಧೀಜಿ ಯವರ ಜೀವನ ಚರಿತ್ರೆ ತ್ಯಾಗ ಬಲಿದಾನಗಳ ಕುರಿತು ಮಾಹಿತಿ ನೀಡಿದರು. ಇಂದಿನ ವಿದ್ಯಾರ್ಥಿಗ ಳೇ ಭಾವಿ ಭಾರತದ ಪ್ರಜೆಗಳು, ಸದೃಢ ಭಾರತದ ನಿರ್ಮಾಣಕ್ಕಾಗಿ ವಿದ್ಯಾರ್ಥಿಗಳು ಶ್ರಮಿಸಬೇಕು ಹಾಗೂ ಎಲ್ಲರೂ



ಸಹೋದರತೆಯಿಂದ ಇರಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಸರ್ವಧರ್ಮ ಪ್ರಾರ್ಥನೆ ಆಯೋಜಿಸಲಾಯಿತು.

# ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ



**ಬೀದರ್, ಜ 30–**ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ ಕಾರ್ಯಕ್ರಮವನ್ನು ಬೀದರ್ ಜಿಲ್ಲಾ ರಂಗಮಂದಿರದಲ್ಲಿ ಜಿಲ್ಲಾ ಮಟ್ಟದಲ್ಲಿ ಆಯೋಜಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ನಡೆಯಿತು. ಈ ಅಂಗವಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಮಕ್ಕಳಿಗಾಗಿ ವಿವಿಧ ಇಲಾಖೆಗಳ ಪರಿಚಯಾತ್ಮಕ ಹಾಗೂ ಅರಿವು ಕಾರ್ಯಕ್ರಮಗಳನ್ನು ಆಯೋಜಿಸಿ, ಇಲಾಖೆಗಳ ಕಾರ್ಯವೈಖರಿ ಹಾಗೂ ಯೋಜನೆಗಳ ಕುರಿತು ಮಾಹಿತಿ ನೀಡಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಮಾನ್ಯ ಜಿಲ್ಲಾಧಿಕಾರಿ ಶಿಲ್ಪಾ ಶರ್ಮ ಅವರು ಮಕ್ಕಳನ್ನು ಉದ್ದೇಶಿಸಿ ಮಾತನಾಡಿ, ಶಿಸ್ತಿನಿಂದ ಜೀವನ ನಡೆಸಿ, ನಿಗದಿತ ಗುರಿಗಳನ್ನು ಇಟ್ಟು ಸಾಧನೆಯತ್ತ ಮುಂದುವರೆಯಬೇಕೆಂದು ಸಲಹೆ ನೀಡಿದರು. ಮಕ್ಕಳೊಂದಿಗೆ ಸಂವಾದ ನಡೆಸಿ ಆತ್ಮವಿಶ್ವಾಸ ಹೆಚ್ಚಿಸುವ ಸಂದೇಶ ನೀಡಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪ್ರಕಾಶ ಎ. ಬನಸೋಡೆ ಅವರು ಮಕ್ಕಳ ಹಕ್ಕುಗಳು ಹಾಗೂ ಮಕ್ಕಳ ಕಾಯ್ದೆಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹೆಣ್ಣು ಮಕ್ಕಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಶ್ರೀಧರ ಎಂ.ಎಸ್. ಅವರು ಮಾತನಾಡಿ, 2015ರ ಜನವರಿ 22ರಂದು ರಾಷ್ಟ್ರ ಮಟ್ಟದಲ್ಲಿ ಆರಂಭಗೊಂಡ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಉದ್ದೇಶ ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು ಸುಧಾರಿಸುವುದು ಹಾಗೂ ಮಹಿಳೆಯರ ಸಬಲೀಕರಣವಾಗಿದೆ ಎಂದು ತಿಳಿಸಿದರು.ಲಿಂಗ ಪಕ್ಷಪಾತ ಹಾಗೂ ಲಿಂಗ ಆಯ್ಕೆ ತಡೆಗಟ್ಟುವುದು, ಹೆಣ್ಣು ಮಕ್ಕಳ ಉಳಿವು ಮತ್ತು ರಕ್ಷಣೆ ಖಚಿತಪಡಿಸುವುದು ಹಾಗೂ ಶಿಕ್ಷಣವನ್ನು ಉತ್ತೇಜಿಸುವುದು ಈ ಯೋಜನೆಯ ಪ್ರಮುಖ ಗುರಿಗಳಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾನ್ಯ ಜಿಲ್ಲಾಧಿಕಾರಿ ಶಿಲ್ಪಾ ಶರ್ಮ, ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶಿಶ್ ರೆಡ್ಡಿ, ಜಿಲ್ಲಾ ಆರೋಗ್ಯಾಧಿಕಾರಿ ಧ್ಯಾನೇಶ್ವರ ನಿರಗುಡೆ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಸುರೇಶ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಯೋಗೇಶ್, ಜಿಲ್ಲಾ ಸಾಂಖ್ಯಿಕ ಅಧಿಕಾರಿ ಸುವರ್ಣಾ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸುನಿತಾ, ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ರೂಪಾ ಕೋಟೆಗೌಡರ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಶಿಮಪ್ಪ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದ ವಂದನಾರ್ಪಣೆಯನ್ನು ಜಿಲ್ಲಾ ನಿರೂಪಣಾಧಿಕಾರಿ ಶ್ರೀಕಾಂತ ಮೆಂಗಜಿ ಅವರು ನೆರವೇರಿಸಿದರು.

# ಹಣದ ವ್ಯವಹಾರ, ನಿರ್ವಹಣೆ ಸರಿಯಾಗಿ ಅರ್ಥೈಸಿಕೊಳ್ಳಿ : ಡಾ. ಸಿ. ವಿಜಯರಾವ್



**ಕಲಬುರಗಿ:ಜ.30:** ಪ್ರಸ್ತುತ ವಾಣಿಜ್ಯ ಮತ್ತು ವ್ಯವಹಾರ ಕ್ಷೇತ್ರದ ಅಗತ್ಯತೆ ಬೇಡಿಕೆ ಸೃಷ್ಟಿಸುತ್ತಿದೆ. ವಾಣಿಜ್ಯ ಮತ್ತು ಹಣಕಾಸು ಶಿಕ್ಷಣವನ್ನು ಸರಿಯಾಗಿ ಅರ್ಥೈಸಿಕೊಳ್ಳಬೇಕು. ವಾಸ್ತವವಾಗಿ ಯುವ ನಾಗರೀಕರು ಕ್ರೆಡಿಟ್ ಕಾರ್ಡಗಳನ್ನು ಅತಿಯಾಗಿ ಬಳಕೆ ಮಾಡುತ್ತಿದ್ದು ಸಾಲ ಮತ್ತು ಬಡ್ಡಿ ವ್ಯವಹಾರವನ್ನು ಸರಿಯಾಗಿ ಖಚಿತಪಡಿಸಿಕೊಂಡು ಎಚ್ಚರಿಕೆಯಿಂದ ಮುನ್ನಡೆಯಿರಿ ಎಂದು ರಾಷ್ಟ್ರೀಯ ತರಬೇತಿದಾರ ಹಾಗೂ ಸಂಪನ್ಮೂಲ ವ್ಯಕ್ತಿ ಡಾ. ಸಿ. ವಿಜಯರಾವ್ ಅಭಿಪ್ರಾಯಪಟ್ಟರು.

ಗುಲಬರ್ಗಾ ವಿಶ್ವವಿದ್ಯಾಲಯದ ವಾಣಿಜ್ಯ ಶಾಸ್ತ್ರ ಅಧ್ಯಯನ ಹಾಗೂ ಸಂಶೋಧನಾ ವಿಭಾಗ ಹಾಗೂ ರಾಷ್ಟ್ರೀಯ ಶೇರು ಮಾರುಕಟ್ಟೆ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಿದ "ಯುವ ನಾಗರಿಕರಿಗಾಗಿ ಹಣಕಾಸು ಶಿಕ್ಷಣ" ಕುರಿತು ಎರಡು ದಿನಗಳ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿ ಕ್ರೆಡಿಟ್ ಕಾರ್ಡಗಳ ಬಳಕೆ ಮಾಹಿತಿ ಜೊತೆಗೆ ಹಣಕಾಸು ಸಾಲ ಒದಗಿಸುವ ಸಂಸ್ಥೆಗಳು ವ್ಯವಹಾರಗಳ ತಿಳುವಳಿಕೆ ಅಗತ್ಯವಿದೆ. ಸಮಯವೆಂಬುದು ಯುವ ಸಮೂಹದ ದೊಡ್ಡ ಆಸ್ತಿ. ನಿಮ್ಮ ಹಣ ಉಳಿತಾಯ, ಶೇರು ಹಣದ ಸಂಯುಕ್ತ ಬಡ್ಡಿಯ ಸಣ್ಣ ಮೊತ್ತ ದೊಡ್ಡ ಮೊತ್ತವಾಗಿ ಬದುಕಿಗೆ ಆಸರೆಯಾಗಲಿದೆ. ಕೆಲವು ಸಂಸ್ಥೆಗಳು ಯುವಕರನ್ನು ಆಕರ್ಷಸಿ ಸಾಲ ಒದಗಿಸಿ ಹೆಚ್ಚಿನ ಬಡ್ಡಿಯ ವಿಧಿಸುತ್ತವೆ ಎಂದ ಅವರು ಸುರಕ್ಷಿತ ಮತ್ತು ಮಾಹಿತಿಯುಕ್ತ ಹೂಡಿಕೆಗಳ ಒಳನೋಟಗಳನ್ನು ವಿವರಿಸಿದರು.

ವಾಣಿಜ್ಯ ವಿಭಾಗದ ಮುಖ್ಯಸ್ಥ ಪ್ರೋ. ರಾಜನಾಳ್ಕರ್ ಲಕ್ಷ್ಮಣ್ ಪ್ರಾಸ್ತಾವಿಕವಾಗಿ ಮಾತನಾಡಿ ಯುವ ನಾಗರೀಕರಿಗಾಗಿ, ಹಣದ ಶಿಕ್ಷಣ, ಹಣದ ನಿರ್ವಹಣೆ ಮತ್ತು ತರಬೇತಿಗಳಿಂದ ವರ್ತಮಾನದ ಹಣಕಾಸು ಮಾರುಕಟ್ಟೆ ಕುರಿತು ತಿಳುವಳಿಕೆ ಮೂಡಿಸಿ ಭವಿಷ್ಯದ ಜೀವನಕ್ಕೆ ಮಾರ್ಗಸೂಚಿ ನೀಡುತ್ತವೆ. ಆರಂಭಿಕ ಬಜೆಟ್ ಮೂಲಕ ಉಳಿತಾಯ ಮಾಡುವುದೇಗೆ? ಎಂಬುದನ್ನು ಕಲಿಯುವ ಮೂಲಕ ಹೆಚ್ಚಿನ ಬಡ್ಡಿ ಸಾಲದ ಹೊರೆ ಹೆಚ್ಚಾಗಿ ವೈಯಕ್ತಿಕ ಬೆಳವಣಿಗೆಯನ್ನು ಸ್ಥಗಿತಗೊಳಿಸುತ್ತದೆ. ಜೊತೆಗೆ ಸಂಯುಕ್ತ ಬಡ್ಡಿಯ ಪ್ರಮುಖ ಪರಿಕಲ್ಪನೆಯನ್ನು ಸಹ ಕಲಿಸಿ ಯೌವನ ಕಾಲದಲ್ಲಿ ಮಾಡಿದ ಸಣ್ಣ ಮತ್ತು ಸ್ಥಿರ ಹೂಡಿಕೆಗಳು ಕಾಲಾನಂತರದಲ್ಲಿ ಹೇಗೆ ಘಾತೀಯವಾಗಿ ಬೆಳೆಯುತ್ತವೆ. ಷೇರು ಮಾರುಕಟ್ಟೆ ಮಾಹಿತಿ ಮತ್ತು ಹಣದ ನಿರ್ವಹಣೆ ಜ್ಞಾನವು ಜೀವನದ ತುರ್ತು ಪರಿಸ್ಥಿತಿಗಳನ್ನು ನಿಭಾಯಿಸಲು, ಸಕಾಲದಲ್ಲಿ ತಿಳುವಳಿಕೆಯುಳ್ಳ ನಿರ್ಧಾರಗಳನ್ನು ತೆಗೆದುಕೊಳ್ಳಲು ಅಗತ್ಯವಾದ ಆತ್ಮವಿಶ್ವಾಸ ಬೆಳೆಸಿ ದೀರ್ಘಾವಧಿಯ ಸ್ಥಿರತೆ ಮತ್ತು ಸ್ವಾತಂತ್ರ್ಯವನ್ನು ಖಚಿತಪಡಿಸುತ್ತದೆ ಎಂದರು.

ಕಾರ್ಯಾಗಾರದಲ್ಲಿ ಸಂಶೋಧನಾ ವಿದ್ಯಾರ್ಥಿಗಳಾದ ಬಸವರಾಜ, ವಿಜಯಲಕ್ಷ್ಮಿ, ಪ್ರೇಮ್ ಸಿಂಗ್, ಶಿವಾನಂದ್, ಮಹಾಂತೇಶ್, ಅನುತಾಮಸ್, ಶ್ರದ್ಧ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ವೈಷ್ಣವಿ, ದೌಲತ್ರಾಯ, ತೇಜಶ್ವಿನಿ ಮತ್ತು ಸಾಯಿರಾಜ ಪ್ರತಿಕ್ರಿಯಿಸಿದರು. ಅತಿಥಿ ಉಪನ್ಯಾಸಕರಾದ ಡಾ. ರೂಪಶ್ರೀ ಅತಿಥಿಗಳನ್ನು ಸ್ವಾಗತಿಸಿ ವಂದಿಸಿದರು. ಶ್ರೀಮತಿ ವಿಜಯಲಕ್ಷ್ಮಿ ಕಾರ್ಯಕ್ರಮ ನಿರ್ವಹಿಸಿದರು.

# ರೇಷ್ಮೆ ವಸ್ತ್ರಗಳ ಮೇಲೆ ಸರ್ಕಾರಿ ನೌಕರರಿಗೂ ಶೇ.5 ರಿಯಾಯಿತಿ ಭರವಸೆ

**ಬೆಂಗಳೂರು,ಜ.30–**ಕೆ.ಎಸ್.ಐ.ಸಿ. ಸಂಸ್ಥೆಯಿಂದ ಖರೀದಿಸುವ ರೇಷ್ಮೆ ಸೀರೆ ಮತ್ತು ರೇಷ್ಮೆ ವಸ್ತ್ರಗಳ ಮೇಲೆ ಭಾರತೀಯ ಆಡಳಿತ ಸೇವಾ ಅಧಿಕಾರಿಗಳಿಗೆನೀಡುತ್ತಿರುವ ಹೆಚ್ಚುವರಿ ಶೇ.5ರಷ್ಟು ರಿಯಾಯಿತಿಯನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೂ ಕೊಡಿಸುವ ಭರವಸೆಯನ್ನು ರಾಜ್ಯದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ನೀಡಿದ್ದಾರೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್ ಷಡಾಕ್ಷರಿ ಬೆಂಗಳೂರಿನಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳನ್ನು ಭೇಟಿ ಮಾಡಿ, ಕೆ.ಎಸ್.ಐ.ಸಿ. ಸಂಸ್ಥೆಯಿಂದ ಖರೀದಿಸುವ ರೇಷ್ಮೆ ಸೀರೆ ಮತ್ತು ರೇಷ್ಮೆ ವಸ್ತ್ರಗಳ ಮೇಲೆ ಭಾರತೀಯ ಆಡಳಿತ ಸೇವಾ ಅಧಿಕಾರಿಗಳಿಗೆ ನೀಡುತ್ತಿರುವ ಹೆಚ್ಚುವರಿ ಶೇ. 5 ರಷ್ಟು ರಿಯಾಯಿತಿಯನ್ನು ರಾಜ್ಯ ಸರ್ಕಾರಿ ನೌಕರರಿಗೂ ವಿಸ್ತರಿಸುವಂತೆ ಮನವಿ ಮಾಡಿರುವ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯದರ್ಶಿಗಳು ಈ ಭರವಸೆ ನೀಡಿದ್ದಾರೆ.

# ಕೇಂದ್ರ ಸರ್ಕಾರ ನಿರ್ಧಾರ ತಕ್ಷಣ ಕೈಬಿಡಬೇಕು : ಬಾಬುರಾವ್ ಚಿಂಚನಸೂರು ಆಗ್ರಹ

**ಗುರುಮಠಕಲ್:ಜ.30:** ಮನರೇಗಾ ಯೋಜನೆಯ ಹೆಸರನ್ನು ಬದಲಿಸುವ ಕೇಂದ್ರ ಸರ್ಕಾರದ ನಿರ್ಧಾರ ಖಂಡಿಸಿ, ಗುರುಮಠಕಲ್ ಪಟ್ಟಣದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಭಾರೀ ಪ್ರತಿಭಟನೆ ನಡೆಸಿದರು. ಗಾಂಧಿ ಮೈದಾನದಿಂದ ಬಸವೇಶ್ವರ ವೃತ್ತದವರೆಗೆ ಜಾಥಾ ನಡೆಸಿ, ತಹಸೀಲ್ದಾರ್ ಚೆನ್ನಮಲ್ಲಪ್ಪ ಗಂಟಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಮಾಜಿ ಸಪ್ತ ಖಾತೆ ಸಚಿವರು ಹಾಗೂ ಶ್ರೀ ಅಂಬಿಗರ ಚೌಡಯ್ಯ ನಿಗಮದ ಅಧ್ಯಕ್ಷರಾದ ಬಾಬುರಾವ್ ಚಿಂಚನಸೂರು, ಮಹಾತ್ಮ ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸಿನಿಂದಲೇ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (ಮನರೇಗಾ) ಯೋಜನೆ ಹುಟ್ಟಿಕೊಂಡಿದೆ ಎಂದು ಹೇಳಿದರು.

ಬಡವರಿಗೆ ಕೆಲಸವನ್ನು ಸಂವಿಧಾನಾತ್ಮಕ ಹಕ್ಕಾಗಿ ನೀಡುವ ಉದ್ದೇಶದಿಂದ, ಅವರು ವಾಸಿಸುವ ಸ್ಥಳದಲ್ಲೇ ವರ್ಷಪೂರ್ತಿ ಉದ್ಯೋಗ ಕಲ್ಪಿಸುವುದೇ ಮನರೇಗಾ ಯೋಜನೆಯ ಆತ್ಮವಾಗಿದೆ. ಆದರೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಗಾಂಧೀಜಿಯವರ ಹೆಸರಿನ ಯೋಜನೆಗಳನ್ನು ದುರ್ಬಲಗೊಳಿಸುವ ಮೂಲಕ ಗ್ರಾಮೀಣ ಆರ್ಥಿಕತೆಯನ್ನು ಹಿನ್ನಡೆಯತ್ತ ತಳ್ಳುತ್ತಿದೆ ಎಂದು ಅವರು ಕಟುವಾಗಿ ಟೀಕಿಸಿದರು.

ಗಾಂಧಿ ಕೇವಲ ಹೆಸರು ಅಲ್ಲ ಅದು ಅನ್ಯಾಯದ ವಿರುದ್ಧದ



ಹೋರಾಟದ ಸಂಕೇತ" ಎಂದು ಚಿಂಚನಸೂರು ಹೇಳಿದರು. ಗಾಂಧಿ ಎಂಬ ಹೆಸರನ್ನು ಅಳಿಸುವ ಯಾವುದೇ ಪ್ರಯತ್ನವನ್ನು ಕಾಂಗ್ರೆಸ್ ಪಕ್ಷ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆ ಹಾಗೂ ಮನವಿ ಸಲ್ಲಿಕೆ ವೇಳೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜ್ ಗೋಪಾಲ್ ರೆಡ್ಡಿ, ಜಿಲ್ಲಾಧ್ಯಕ್ಷ ಬಸರೆಡ್ಡಿ ಅನಪುರ, ಕೆಪಿಸಿಸಿ ಸದಸ್ಯ ಶರಣಪ್ಪ ಮಾನೇಗಾರ್, ಖಜಾಂಚಿ ಚಿದಾನಂದಪ್ಪ, ಗುರುಮಠಕಲ್ ಬ್ಲಾಕ್ ಅಧ್ಯಕ್ಷ ಕೃಷ್ಣ ಚಪೆಟ್ಲ, ಸಾಯಬಣ್ಣ ಬೋರಬಂಡ, ಚಾಂದ್ ಪಾಷ, ಸೈಯ್ಯದ್ ಬಾಬಾ (ಅಸೆಂಬ್ಲಿ ಅಧ್ಯಕ್ಷ), ಆನಂದ್, ಆಂಜನೇಯ, ತಿಮ್ಮಾರೆಡ್ಡಿ, ಸುದರ್ಶನ ಪಾಟೀಲ್, ಬಾಬು ತಲಾರಿ, ಫಯಾಜ್ ಅಹಮದ್, ಅಕ್ತರ್ ಪ್ಯಾರೆ, ಕಾಶಪ್ಪ ದೊರೆ, ಕಾಶಪ್ಪ ಚಿನ್ನಾಕರ, ಸರೋಜಾ, ಶಾಂತಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಎಸ್.ಸಿ–ಎಸ್.ಟಿ ವಿದ್ಯಾರ್ಥಿಗಳ ವಿದೇಶ ಶಿಕ್ಷಣಕ್ಕೆ ಹೆಚ್ಚಿನ ಸೌಕರ್ಯ ಕಲ್ಪಿಸಿ:ಡಾ. ಜಿ. ಗೋಪಾಲರಾವ್



**ಕಲಬುರಗಿ,ಜ.30:**ಸ್ವಾತಂತ್ರ್ಯ ಪಡೆದು ಇಷ್ಟು ವರ್ಷಗಳಾದರು ಎಸ್.ಸಿ–ಎಸ್.ಟಿ ಸಮುದಾಯವು ಇಂದಿಗೂ ಆರ್ಥಿಕ, ಸಾಮಾಜಿಕ ಮತ್ತು ರಾಜಕೀಯವಾಗಿ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿ ಕಂಡಿಲ್ಲ. ವಿದೇಶಿ ಶಿಕ್ಷಣದ ಆಸೆ ಹೊಂದಿರುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತಿಲ್ಲ. ಸಮಾಜ ಕಲ್ಯಾಣ ಇಲಾಖೆ ಈ ನಿಟ್ಟಿನಲ್ಲಿ ಹೆಚ್ಚಿನ ಗಮನ ಹರಿಸಬೇಕು ಎಂದು ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯ ಡಾ. ಜಿ. ಗೋಪಾಲರಾವ್ ಹೇಳಿದರು.

ಗುರುವಾರ ಕಲಬುರಗಿ ನಗರದ ಡಾ. ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಲೋಹಿಯಾ ಕಲಾ ತಂಡ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ "ನಾಗರಿಕ ಹಕ್ಕುಗಳ ರಕ್ಷಣಾ ಕಾಯ್ದೆ ಹಾಗೂ ಜಾಗೃತಿ ಅರಿವು"ವಿಚಾರಗೋಷ್ಠಿ ಮತ್ತು "ಏಕ ಭಾರತ್ ಶ್ರೇಷ್ಠ ಭಾರತ" ನಾಟಕ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಧುನಿಕತೆಯ ಇಂದಿನ ಜೀವನದಲ್ಲಿ ಅಲ್ಲಲ್ಲಿ ಇನ್ನು ಹಳೆಯ ಶೋಷಣೆಯ ಪದ್ಧತಿಗಳು ಮತ್ತೆ ಮರುಕಳಿಸುತ್ತಿರುವುದು ಬೇಸರದ ಸಂಗತಿಯಾಗಿದೆ. ಶಿಕ್ಷಣ, ಅರಿವು–ಜಾಗೃತಿ ಮೂಲಕವೇ ಜಾತಿ ಪದ್ಧತಿ ಹೋಗಲಾಡಿಸಬೇಕಿದ್ದು, ಈ ದಿಕ್ಕಿನಲ್ಲಿ ಸರ್ಕಾರ ಹಡಚ್ಚಿನ ಒತ್ತು ನೀಡಬೇಕಂದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ಚಂದ್ರಶೇಖರ್ ದೊಡ್ಡಮನಿ ಮಾತನಾಡಿ, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರ ಜಾತಿ ಪ್ರಮಾಣಪತ್ರ ಪಡೆಯುವ ಪ್ರಕ್ರಿಯೆಯಲ್ಲಿ ಸರಳೀಕರಣ ಮಾಡಿದೆ. ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾಗುವ ಪ್ರಕರಣಗಳ ಮಾಹಿತಿ ವಿಳಂಬವಾಗುತ್ತಿರುವುದರಿಂದ ಸಂತ್ರಸ್ತರಿಗೆ ನ್ಯಾಯ ಸಿಗುವುದು ತಡವಾಗುತ್ತಿದೆ. ಇದಕ್ಕಾಗಿ ಸಮುದಾಯದ ಮುಖಂಡರ ಸಹಕಾರ ಅಗತ್ಯವಾಗಿದೆ ಎಂದರು.

ನ್ಯಾಯವಾದಿಗಳು ರಾಜು ಮುದ್ದುಡಗಿ ಅವರು ಜಾತಿ ದೌರ್ಜನ್ಯ ಕಾಯ್ದೆ ಮತ್ತು ಜಾತಿ ಪ್ರಮಾಣ ಪತ್ರ ಪ್ರಕರಣಗಳ ನಿರ್ವಹಣೆ ಕುರಿತು ಉಪನ್ಯಾಸದಲ್ಲಿ ಮಾತನಾಡುತ್ತಾ, ತಾಲೂಕಿನ ತಹಶಿಲ್ದಾರರು, ಎಸ್.ಸಿ–ಎಸ್.ಟಿ ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದವರನ್ನು ಒತ್ತೆ ಹಚ್ಚಿ ಅವರ ವಿರುದ್ದ ಕಾನೂನು ಕ್ರಮ ಕೈಗೊಳ್ಳುವ ಮೂಲಕ ತಳ ಸಮುದಾಯಕ್ಕೆ ನ್ಯಾಯ ಒದಗಿಸಬೇಕು. ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದವರಿಗೆ 5 ತಿಂಗಳಿಂದ 1 ವರ್ಷದವರೆಗೆ ಜೈಲು ಶಿಕ್ಷೆ ನೀಡಬಹುದಾಗಿದೆ ಎಂದರು.

ಸಮಾಜದ ಹಿರಿಯ ಮುಖಂಡ ಎ. ಬಿ. ಹೊಸಮನಿ ಅವರು ಮಾತನಾಡಿ, ಹಿಂದೆಲ್ಲ ದೌರ್ಜನ್ಯ ಪ್ರಕರಣಗಳಲ್ಲಿ ಸಾವು ಸಂಭವಿಸಿದಾಗ ಅಧಿಕಾರಿಗಳು ತಕ್ಷಣ ಸ್ಪಂದಿಸಿ ಪರಿಹಾರ ನೀಡುತ್ತಿದ್ದರು. ಆದರೆ ಇತ್ತೀಚೆಗೆ ಆಡಳಿತಾತ್ಮಕ ಕೆಲಸಗಳ ವಿಳಂಬ ಧೋರಣೆಯಿಂದ ನೊಂದ ಕುಟುಂಬಗಳು ಕಚೇರಿಗಳಿಗೆ ಅಲೆಯುವಂತಾಗಿದೆ. ಜಿಲ್ಲಾಡಳಿತವು ಕಾಲಮಿತಿಯಲ್ಲಿ ಪರಿಹಾರ ಒದಗಿಸುವತ್ತ ಗಮಹರಿಸಬೇಕು ಎಂದು ಅಭಿಪ್ರಾಯಪಟ್ಟ ಅವರು, ಎಸಿ/ಎಸ್‌ಟಿ ದೌರ್ಜನ್ಯ ಪ್ರತಿಬಂಧಕ ಕಾಯ್ದೆ 1995, 2015 ಮತ್ತು 2016ರ ತಿದ್ದುಪಡಿಗಳ ಬಗ್ಗೆ ಇಲಾಖೆಯು ಜನರಲ್ಲಿ ಜಾಗೃತಿ ಮೂಡಿಸಬೇಕು. ಕಲೆ ಮತ್ತು ಸಾಹಿತ್ಯ ಅಸ್ಪೃಶ್ಯತೆ ವಿರುದ್ಧ ಹೋರಾಡಲು ಅಂಬೇಡ್ಕರ್ ಅವರ ವಿಚಾರಧಾರೆಗಳು ಹೆಚ್ಚಿನ ರೀತಿಯಲ್ಲಿ ಪಸರಿಸುವ ಕೆಲಸ ಸರ್ಕಾರ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಾದ ಅನಿಲಕುಮಾರ ಜಾಧವ, ಸಿದ್ಧಾರೂಢ ಸಮತಾ ಜೀವನ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರುಗಳಾದ ಚೇತನ್ ಆರ್. ಗುರಿಕಾರ್, ಸತೀಶ್ ಸಂಗನ, ವಿಜಯಲಕ್ಷ್ಮಿ, ಪ್ರಭುಲಿಂಗ, ಬುಡ ಜಂಗಮ್ ಸಮಾಜ ಜಿಲ್ಲಾಧ್ಯಕ್ಷ ಪಂಡಿತ್ ಸರ್ವಾಟಿ, ಅಲೆಮಾರಿ ಸಮಾಜ ಜಿಲ್ಲಾಧ್ಯಕ್ಷ ಅನಿಲ್ ಕಾಂಬಳೆ ಸೇರಿದಂತೆ ಸಮಾಜದ ನೂರಾರು ಮುಖಂಡರು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ನಂತರ ಪ್ರಭುಲಿಂಗ ಕಿಣಗಿ ನೇತೃತ್ವದ ಲೋಹಿಯಾ ಕಲಾ ತಂಡ ಬಳಗದಿಂದ "ಏಕಭಾರತ ಶ್ರೇಷ್ಠ ಭಾರತ" ನಾಟಕ ಪ್ರದರ್ಶನ ಕಂಡಿತ್ತು.

# ವಸತಿ ಸೌಲಭ್ಯಕ್ಕೆ ಮಾಜಿ ದೇವದಾಸಿ ಮಹಿಳೆಯರಿಂದ ಅರ್ಜಿ ಆಹ್ವಾನ

ಧೈರ್ಯದ ದಾರಿ

**ರಾಯಚೂರು ಜ,30–** ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ಗ್ರಾಮೀಣ ಮತ್ತು ನಗರ ಫಲಾನುಭವಿಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ.

ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ಗ್ರಾಮೀಣ ಫಲಾನುಭವಿಗಳಿಗೆ 262 ಮತ್ತು ನಗರ ಫಲಾನುಭವಿಗಳಿಗೆ 140 ವಸತಿ ಸೌಲಭ್ಯ ಕಲ್ಪಿಸಲು ಅನುದಾನವನ್ನು ರಾಜೀವ್ ಗಾಂಧಿ ವಸತಿ ನಿಗಮರವರಿಗೆ ಆಡಳಿತ್ಮಾತಕ ಅನುಮೋದನೆಯನ್ನು ನೀಡಿರುತ್ತಾರೆ. ಜಿಲ್ಲೆಯ ಮಾಜಿ ದೇವದಾಸಿ ಮಹಿಳೆಯರು ನಿವೇಶನ ಹೋದಿರುವ ವಸತಿ ರಹಿತ ಫಲಾನುಭವಿಗಳು ದೇವದಾಸಿ ಪುನರ್ವಸತಿ ಯೋಜನೆ ಜಿಲ್ಲಾ ಕಚೇರಿ ರಾಯಚೂರು, #1–5–166 ಸ್ಟಾರ್ ಫಂಕ್ಷನ್ ಹಾಲ್ ಎದುರುಗಡೆ, ಬಾಲಾಜಿ ಕಾಂಪ್ಲೆಕ್ಸ್ ಹತ್ತಿರ, ಗೋಡ ಶೇಡ್ ಏರಿಯಾ ರಾಯಚೂರು–584101, ದಿನಾಂಕ:01–02–2026 ರಿಂದ 28–02–2026ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕ ಯೋಜನಾಷ್ಠಾನಧಿಕಾರಿಗಳು ಮಾನ್ವಿ, ಸಿರವಾರ, ರಾಯಚೂರು ಮೊಬೈಲ್ ಸಂಖ್ಯೆ: 7406034925, ದೇವದುರ್ಗ: 9980879540 ಲಿಂಗಸೂಗೂರು, ಮಸ್ಕಿ ಹಾಗೂ ಸಿಂಧನೂರು: 8861454090ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ಜಾತ್ರಮಹೋತ್ಸವ ಅಂಗವಾಗಿ ನಡೆದ ಹರಾಜಿನಿಂದ 52 ಲಕ್ಷ ಅದಾಯ: ಭೀಮರಾಯ ಬಿ.ರಾಮಸಮುದ್ರ

ಧೈರ್ಯದ ದಾರಿ



**ಮಾನ್ವಿ,ಜ.30–**ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಗುರುವಾರ ಸಂಜೆ ಮುಜೂರಾಯಿ ಇಲಾಖೆಗೆ ಸೇರಿದ ಪ್ರಸಿದ್ದ ಪುಣ್ಯಕ್ಷೇತ್ರವಾದ ನೀರಮಾನ್ವಿ ಗ್ರಾಮದ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಫೆ.6ರಂದು ನಡೆಯುವ ಜಾತ್ರ ಮಹೋತ್ಸವದ ಅಂಗವಾಗಿ ವಿವಿಧ ಸೇವೆಗಳಿಗೆ ನಡೆದ ಹರಾಜು ಪ್ರಕ್ರಿಯೆಯಲ್ಲಿ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದ ಆಡಳಿತಾಧಿಕಾರಿಗಳು ಹಾಗೂ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಪ್ರಸಿದ್ದ ಪುಣ್ಯಕ್ಷೇತ್ರವಾದ ನೀರಮಾನ್ವಿ ಗ್ರಾಮದ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಪ್ರತಿ ವರ್ಷ ನಡೆಯುವ ಜಾತ್ರ ಮಹೋತ್ಸವ ಹಾಗೂ ದೀಪಾವಳಿ ಪಾಡ್ಯ ಮಹೋತ್ಸವಗಳಲ್ಲಿ ಭಕ್ತರು ರಾಜ್ಯ ಸೇರಿದಂತೆ ವಿವಿಧ ರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲಿದ್ದಾರೆ ಜಾತ್ರೆ ಇರುವ ದಿನಗಳಾದ ಫೆ.1ರಿಂದ ಫೆ.10 ರವರೆಗೆ ಭಕ್ತರಿಗಾಗಿ ತೆಂಗಿನಕಾಯಿ ಸಗಟು ಮಾರಾಟಕ್ಕಾಗಿ ನಡೆದ ಹರಾಜಿನಲ್ಲಿ 15 ಲಕ್ಷ ರೂಗಳಿಗೆ ರಮೇಶ ಎನ್ನುವವರು ಪಡೆದಿದ್ದಾರೆ.

ಮಂಗಳಾರತಿ ಮತ್ತು ಕಾಯಿ ಒಡೆಯುವುದಕ್ಕೆ 6 ಲಕ್ಷ ರೂಗಳಿಗೆ ಅರಕೇರಾ ವಿರೇಶ ಎನ್ನುವವರು ಪಡೆದಿದ್ದಾರೆ. ಜಾತ್ರೆ ಸಮಯದಲ್ಲಿ ಅಂಗಡಿ ಹಾಕುವುದಕ್ಕೆ ಜಾಗವನ್ನು ಹನುಮಂತ ತಾಸಿ ಎನ್ನುವವರು 10 ಲಕ್ಷ 25 ಸಾವಿರ ರೂಗಳಿಗೆ ಪಡೆದಿದ್ದಾರೆ. ಜಾತ್ರೆ ನಡೆಯುವ ಹತ್ತು ದಿನಗಳನ್ನು ಹೊರತು ಪಡೆಸಿ ಒಂದು ವರ್ಷದ ಅವಧಿಗಾಗಿ ಕಾಯಿ ಮತ್ತು ಮಂಗಳಾರತಿ ಸೇವೆಗಾಗಿ ಅಯ್ಯಣ್ಣ ಬಾಗೋಡಿ ಯವರು 21ಲಕ್ಷದ 15 ಸಾವಿರಕ್ಕೆ ಪಡೆದುಕೊಂಡಿದ್ದಾರೆ. ಈ ಹಾರಜಿನಿಂದಾಗಿ ಒಟ್ಟು 52 ಲಕ್ಷದ 42 ಸಾವಿರ ರೂಗಳ ಅದಾಯ ಸರ್ಕಾರದ ಮುಜೂರಾಯಿ ಇಲಾಖೆಗೆ ದೊರತ್ತಂತೆ ಆಗಿದೆ. ಎಂದು ತಿಳಿಸಿದರು.

ಹರಾಜಿನಲ್ಲಿ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದ ಕಾರ್ಯದರ್ಶಿಗಳಾದ ಕಂದಾಯ ನಿರೀಕ್ಷಕರಾದ ಚರಣಸಿಂಗ್, ಗ್ರಾಮಲೆ ೀಕ್ಕಾಧಿಕಾರಿ ಸಿಂಧು,ದೇವಸ್ಥಾನದ ಮಲ್ಲಿಕಾರ್ಜುನ ಪೂಜಾರಿ, ಸೇರಿದಂತೆ ಗ್ರಾಮಸ್ಥಾರು ಹರಾಜು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ಬೀಗ ಮುರಿದು 8.58 ಲಕ್ಷ ರೂ.ಕಳವು




**ಕಲಬುರಗಿ,ಜ.30–**ನಗರ ಹೊರವಲಯದ ಡಬರಾಬಾದ ಕ್ರಾಸ್ ಹತ್ತಿರವಿರುವ ವಿಪಿಆರ್ ಲಾಜೆಸ್ಟಿಕ್ ಮತ್ತು ಸರ್ವಿಸೆಸ್ ಪ್ರಾವೀಟ್ ಲಿಮಿಟೆಡ್ ಕಂಪನಿ ಕಾರ್ಯಾಲಯದ ಬೀಗ ಮುರಿದು ಕಳ್ಳರು 8,58,967 ರೂ.ನಗದು ಕಳವು ಮಾಡಿದ್ದಾರೆ ಎಂದು ಕಂಪನಿಯ ಮ್ಯಾನೇಜರ್ ವಿರೇಶ ಗುರನಾಳೆ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

## ಎಸ್.ಎಸ್.ಎಲ್.ಸಿ. ಫಲಿತಾಂಶ ಹೆಚ್ಚಳಕ್ಕೆ ಶಿಕ್ಷಕರಿಗೆ ಸಿಇಓ ಸೂಚನ



**ಕಲಬುರಗಿ,ಜ.30:** ಸೇಡಂ ತಾಲೂಕಿನ ಇಟಕಾಲ್ ಸರ್ಕಾರಿ ಪ್ರೌಢಶಾಲೆಗೆ ಗುರುವಾರ ಜಿಲ್ಲಾ ಪಂಚಾಯತ ಸಿ.ಇ.ಓ ಭಂವರಸಿಂಗ್ ಮೀನಾ ಅವರು ಭೇಟಿ ನೀಡಿ ಅರ್ಧಗಂಟೆಕ್ಕಿಂತ ಹೆಚ್ಚಿನ ಹೊತ್ತು 10ನೇ ತರಗತಿ ಮಕ್ಕಳೊಂದಿಗೆ ಕಳೆದಿದ್ದಲ್ಲದೆ ಕನ್ನಡ ವಿಷಯ ಬೋಧನೆ ಮಾಡುವ ಮೂಲಕ ಕನ್ನಡ ಮೇಷ್ಟ್ರಾಗಿ ಗಮನ ಸೆಳೆದರು.

ಈ ಸಂದರ್ಬದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಎಸ್.ಎಸ್.ಎಲ್.ಸಿ ಪರೀಕ್ಷೆ ನಿಮ್ಮ ಜೀವನ ದ ಅತ್ಯಮೂಲ್ಯ ಘಟ್ಟವಾಗಿದ್ದು, ಸಮಯ ವ್ಯರ್ಥ ಮಾಡದೆ ಓದಿನತ್ತ ಹೆಚ್ಚು ಗಮನ ಹರಿಸಬೇಕು. ಕಾಲಹರಣ ಮಾಡದೆ ಸಮಯಕ್ಕೆ ಬೆಲೆ ಕೊಡಬೇಕು. ಅಂದಾಗ ಭವಿಷ್ಯದಲ್ಲಿ ಏನಾದರು ಸಾದಿಸುವಿರಿ ಎಂದು ಮಕ್ಕಳಿಗೆ ಪ್ರೋತ್ಸಾಹದಾಯಕ ಮಾತುಗಳನ್ನಾಡಿದರು.

ಇನ್ನು ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಸುಧಾರಣೆ ಯಾಗಬೇಕು. ಫಲಿತಾಂಶ ಹೆಚ್ಚಿಸಲು ಶಿಕ್ಷಕರು ಹೆಚ್ಚು ಮುತುವರ್ಜಿ ವಹಿಸಬೇಕು. ಮಕ್ಕಳ ಮೇಲೆ ವಿಶೇಷ ಗಮನ ಹರಿಸಬೇಕು ಎಂದರಲ್ಲದೆ "ಅರಿವೇ ಗುರು" ಪುಸ್ತಕದ ಮಹತ್ವ ಹಾಗೂ ಪರೀಕ್ಷೆಗೆ ಈ ಪುಸ್ತಕ ತುಂಬಾ ಉಪಯುಕ್ತವಾಗಿದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು.ನಂತರ ಅಕ್ಷರ ದಾಸೋಹ ಬಿಸಿಯೂಟ ಕೋಣೆಗೆ ಭೇಟಿ ನೀಡಿದ ಭಂವರ್ ಸಿಂಗ್ ಮೀನಾ ಅವರು, ಬೇಳೆ, ಅಕ್ಕಿ, ಹಾಲಿನ ಪುಡಿ, ರಾಗಿ, ಎಣ್ಣೆ ಹಾಗೂ ಇನ್ನಿತರ ಪದಾರ್ಥಗಳನ್ನು ಪರಿಶೀಲಿಸಿ ಮಕ್ಕಳಿಗೆ ನೀಡುವ ಭಿಸಿಯೂಟ ಗುಣಮಟ್ಟದಿಂದಿರಬೇಕು. ಪಾತ್ರೆಗಳ ನಿರ್ವಹಣೆ ಸರಿಯಾಗಿರಬೇಕು. ಸ್ವಚ್ಛತೆ, ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ಅಡುಗೆ ಸಿಬ್ಬಂದಿಗಳಿಗೆ ಖಡಕ್ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕಾ ಪಂಚಾಯತ್ ಇ.ಓ ಚೆನ್ನಪ್ಪ ರಾಯಣ್ಣನವರ, ಬಿ.ಇ.ಓ ಮಾರುತಿ ಹುಜರತಿ ಸೇರಿದಂತೆ ಇತರೆ ಅಧಿಕಾರಿಗಳು, ಶಾಲೆಯ ಮುಖ್ಯ ಗುರುಗಳು, ಶಿಕ್ಷಕರು, ಪಿ.ಡಿ.ಓ ಉಪಸ್ಥಿತರಿದ್ದರು.

## ಕಬ್ಬಿನ ಸೊಪ್ಪು ಸಾಗಿಸುವ ಟ್ರ್ಯಾಕ್ಟರಗೆ ಅಗ್ನಿ ಅವಘಡ : ಎಂಜಿನ್ ಸಹಿತ ಟ್ರ್ಯಾಲಿ ಸುಟ್ಟು ಭಸ್ಮ



**ಜಮಖಂಡಿ:ಜ.30:**ತಾಲೂಕಿನ ಟಕ್ಕಳಕಿ ಗ್ರಾಮದಲ್ಲಿಕಬ್ಬಿನ ರವದಿ( ಸೊಪ್ಪು) ತುಂಬಿಕೊಂಡು ಹೋಗುತ್ತಿದ್ದ ಟ್ರ್ಯಾಕ್ಟರ್ ಟ್ರ್ಯಾಲಿಗೆ ವಿದ್ಯುತ್ ತಂತಿ ತಗುಲಿ ಟ್ರ್ಯಾಕ್ಟರ ಎಂಜಿನ್ ಸಹಿತ ಸಂಪೂರ್ಣ ಭಸ್ಮವಾದ ಘಟನೆ ನಡೆದಿದೆ.ಟಕ್ಕಳಕಿ ಗ್ರಾಮದ ರೈತ ವಸಂತ ಚವ್ಹಾನ್ ಎಂಬುವರ ಟ್ರ್ಯಾಕ್ಟರ ಎಂದು ತಿಳಿದು ಬಂದಿದೆ ಸ್ಥಳಿಯರು ಹಾಗೂ ರೈತ ಬೆಂಕಿ ಆರಿಸಲು ಹರಸಾಹಸ ಪಟ್ಟರು ಕೊಡ ನೋಡ ನೋಡ್ತಿದ್ದಂತೆ ಸುಟ್ಟು ಭಸ್ಮವಾದ ಟ್ರ್ಯಾಕ್ಟರ್ ಹಾಗೂ ಕಬ್ಬಿನ ರವದಿ (ಸೊಪ್ಪು)ಟ್ರ್ಯಾಕ್ಟರ್ ಎಂಜಿನ್ ಟ್ರೇಲರ್ ಹಾಗೂ ಸೊಪ್ಪು ಸೇರಿ 8–9 ಲಕ್ಷ ರೂಪಾಯಿ ನಷ್ಟವಾಗಿದೆ ಎಂದು ಮಾಹಿತಿ ಲಬ್ಯವಾಗಿದೆ ಸಾವಳಗಿ ಪೊ?ಲಿಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ಜರುಗಿದೆ

# ಸಾಹಿತ್ಯ ಪರಂಪರೆ ದಾಟಿಸುವ ಹೊಣೆಗಾರಿಕೆ ಪ್ರಕಾಶಕರ ಮೇಲಿದೆ: ನ. ರವಿಕುಮಾರ

**ಬಸವಕಲ್ಯಾಣ: ಜ.30:** ಪರಂಪರೆಯ ಅರಿವನ್ನು ತಲೆಮಾರಿನಿಂದ ತಲೆಮಾರಿಗೆ ದಾಟಿಸುವ ಹೊಣೆಗಾರಿಕೆ ಪ್ರಕಾಶಕರ ಮೇಲಿದೆ ಎಂದು ಕರ್ನಾಟಕ ಪ್ರಕಾಶಕರ ಸಂಘದ ಕಾರ್ಯದರ್ಶಿ ಅಭಿನವ ರವಿಕುಮಾರ್ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಬುಧವಾರ ಏರ್ಪಡಿಸಿದ್ದ 'ಪುಸ್ತಕೋದ್ಯಮ ನೆಲೆ–ಬೆಲೆ' ಕುರಿತ ಸಂವಾದದಲ್ಲಿ ಮಾತನಾಡಿದ ಅವರು, ಇಂದಿನ ದಿನಗಳಲ್ಲಿ ಮಾಹಿತಿಯನ್ನೇ ಜ್ಞಾನ ಎಂದು ಭಾವಿಸುವ ಹೊಸತಲೆಮಾರು ರೂಪುಗೊಳ್ಳುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು .ಸ್ಪರ್ಧಾತ್ಮಕ ಪಠ್ಯಗಳ ನೆಪದಲ್ಲಿ ಮೂಲ ಪಠ್ಯಗಳನ್ನು ಕಲಿಸದೆ ಗೈಡ್ ಗಳನ್ನೇ ಅವಲಂಬಿಸಬೇಕಾದ ಪರಿಸ್ಥಿತಿ ಉಂಟಾಗಿದೆ. ಮೂಲ ಪಠ್ಯಗಳ ಓದು ವಿದ್ಯಾರ್ಥಿಗಳಲ್ಲಿ ಬೌದ್ಧಿಕ ವಿಕಾಸಕ್ಕೆ ಮತ್ತು ಸೃಜನಶೀಲತೆಗೆ ಸಾಮರ್ಥ್ಯ ಸಹಕಾರಿ ಯಾಗಿದೆ ಎಂದರು. ಹೊಸ ಹೊಸ ಆಲೋಚನೆಗಳು ಮೊಳೆಯ ಲು, ವಿಶ್ಲೇಷಣಾ ಮನೋಧರ್ಮ ಹೆಚ್ಚಾಗುಲು ಕಲಿಕೆಯ ಗುಣಮಟ್ಟ ಸುಧಾರಿಸಲು ಮೂಲ ಪಠ್ಯಗಳ ಅನುಸಂಧಾನ ಅಗತ್ಯ ಎಂದರು.

ಸೃಷ್ಟಿ ಪಬ್ಲಿಕೇಷನ್ಸ್ ಸೃಷ್ಟಿ ನಾಗೇಶ್ ಮಾತನಾಡಿ , ಶರಣರ ನಾಡು ಬಸವಕಲ್ಯಾಣ ಮತ್ತು ವಚನಸಾಹಿತ್ಯದ ಗರಿಮೆಯನ್ನು ನೋಡಿ ಒಮ್ಮೆ ಮನಸ್ಸಿನೊಳಗೆ ತೆಗೆದುಕೊಳ್ಳಬೇಕು. ಚಾಲುಕ್ಯರ ಆಡಳಿತದ ಚಿತ್ರಣವನ್ನು, ಬಸವಣ್ಣನವರ ಆದರ್ಶವನ್ನು ಹೊಸ ನೆಲೆಗಳಲ್ಲಿ ಅಧ್ಯಯನ ಮಾಡಿ ಕೃತಿ ರೂಪ ನೀಡಬೇಕು. ವಚನ ಸಾಹಿತ್ಯ ಮತ್ತು ಶರಣ ಸಂಸ್ಕೃತಿಯ ಅರಿವಿನ ವಿಸ್ತಾರವನ್ನು ಓದುಗ ವಲಯಕ್ಕೆ ತಿಳಿಸುವ ಕೆಲಸ ಈಗಾಗಲೇ ನಡೆಯುತ್ತಿದೆ. ಅದು ಇನ್ನಷ್ಟು ಸಾಧ್ಯವಾಗಬೇಕು ಎಂದರು.



ಕನ್ನಡ ಪುಸ್ತಕ ಪ್ರಾಧಿಕಾರ ಸಾಹಿತ್ಯ ಆಕಾಡೆಮಿ ಮುಂತಾದ ಸಾಹಿತ್ಯ ಸಂಸ್ಥೆಗಳು ಇಂಥ ಪ್ರದೇಶಗಳಲ್ಲಿ ಕಮ್ಮಟಗಳನ್ನು ನಡೆಸಿ ಯುವ ಬರಹಗಾರರ ಮತ್ತು ಓದುಗರ ಸಮುದಾಯವನ್ನು ಬೆಳೆಸಬೇಕು ಎಂದರು.

ಅಮೂಲ್ಯ ಪುಸ್ತಕದ ಕೃಷ್ಣ ಚೆಂಗಡಿ ಮಾತನಾಡಿ, ಪುಸ್ತಕಗಳು ಗಂಭೀರ ಓದುಗರಿಗೆ ತಲುಪಿಸುವ ಜವಾಬ್ದಾರಿ ಸರ್ಕಾರ ಮತ್ತು ಶಿಕ್ಷಣ ಸಂಸ್ಥೆಗಳ ಮೇಲಿದೆ. ಪ್ರಕಾಶನ ಸಂಸ್ಥೆ ಬೆಳವಣಿಗೆ ಓದುಗ ವರ್ಗವನ್ನು ಅವಲಂಬಿಸಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಲೋಕವನ್ನು ಅರಿಯಲು ಅಕ್ಷರ ಮತ್ತು ಪುಸ್ತಕ ಸಂಸ್ಕೃತಿಯಿಂದ ಸಾಧ್ಯ. ಸಂಶೋಧನೆ, ವಿಮರ್ಶೆ, ಸಾಹಿತ್ಯದ ತಾತ್ವಿಕತೆಗಳ ಗಂಭೀರ ಅನುಸಂಧಾನಕ್ಕಾಗಿ ಮೂಲಪಠ್ಯ ಓದು ಬೇಕು. ಸಮಾಜ, ರಾಜಕಾರಣ ಸೇರಿ ಎಲ್ಲವುಗಳನ್ನು ಸಾಂಸ್ಕೃತಿಕ ಪಠ್ಯವಾಗಿ ಅಧ್ಯಯನ ಮಾಡಬೇಕಾದರೂ ಪುಸ್ತಕಗಳು ಪ್ರತಿಕಾರಗಳಾಗಿ ಪರಿಗಣಿಸಬೇಕಾಗಿದೆ ಎಂದರು.

ಬೆಂಗಳೂರಿನ ಪ್ರಖ್ಯಾತ ಪ್ರಕಾಶನ ಸಂಸ್ಥೆಗಳಾದ ಭೂಮಿ ಬುಕ್ಸ್ ನ ವಿಶಾಲಕ್ಷಿ ಶರ್ಮ , ಕದಂಬ ಪ್ರಕಾಶನದ ನಾಗೇಶ್, ಕಲ್ಲಚ್ಚು ಪ್ರಕಾಶನದ ಮಹೇಶ್ ನಾಯಕ್, ಕನ್ ಕ್ಲೇವ್ ಇಂಡಿಯಾ ಪ್ರಕಾಶನದ ನಂದೀಶ್ ಸಂವಾದದಲ್ಲಿ ಮಾತನಾಡಿದರು. ಉಪನ್ಯಾಸಕರಾದ ಅಶೋಕ ರೆಡ್ಡಿ ಗದಲೇಗಾಂವ, ಶ್ರೀನಿವಾಸ ಉಮಾಪುರೆ, ವಿವೇಕಾನಂದ ಶಿಂದೆ, ರೋಶನ್ ಬಿ, ಎಂಡಿ ಜಬಿ, ಜಗದೇವಿ ಜಾವಳಗೆ, ಶೀತಲ್ ರೆಡ್ಡಿ, ಸನತ್ ರೆಡ್ಡಿ, ಪ್ರಿಯಾ ಚೌಹಾಣ್ ಮೊದಲಾದವರು. ಚೆನ್ನಬಸಪ್ಪ ಗೌರ ಸ್ವಾಗತಿಸಿದರು. ಗಂಗಾಧರ ಸಾಲಿಮಠ ನಿರೂಪಿಸಿದರು. ಸಂಗೀತಾ ಮಹಾಗಾಂವೆ ವಂದಿಸಿದರು.

# ಕನ್ನಡ ಸಾರಸ್ವತ ಲೋಕವನ್ನು ಶ್ರೀಮಂತ ಗೊಳಿಸಿರುವ ರಾಷ್ಟ್ರಕವಿ ಜಿಎಸ್ ಶಿವರುದ್ರಪ್ಪ :ಡಾ.ರಮೇಶ ಮೂಲಗೆ

**ಕಮಲನಗರ :ಜ.30:**ಕನ್ನಡ ಕಾವ್ಯ ಮತ್ತು ಕಾವ್ಯ ಮೀಮಾಂಸೆಯ ಕ್ಷೇತ್ರಕ್ಕೆ ಜಿ.ಎಸ್.ಎಸ್ ಕೊಡುಗೆ ಅಪಾರ. ಪಾಶ್ಚಾತ್ಯ ಹಾಗೂ ಭಾರತೀಯ ಕಾವ್ಯ ಮೀಮಾಂಸೆ ಕುರಿತ ಅವರ ದೃಷ್ಟಿಕೋನ ಶ್ರೇಷ್ಠಮಟ್ಟದ್ದು ಎಂದು ಮಹಾರಾಷ್ಟ್ರದ ಉದಯಗಿರಿ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ.ರಮೇಶ ಮೂಲಗೆ ಹೇಳಿದರು.

ಪಟ್ಟಣದ ಡಾ.ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆಯ ಸಭಾಂಗಣದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಚಕೋರ ಸಾಹಿತ್ಯ ವಿಚಾರ ವೇದಿಕೆ ಸಹಯೋಗದಲ್ಲಿ ಗುರುವಾರ ಜಿ.ಎಸ್.ಶಿವರುದ್ರಪ್ಪ ಅವರ ಕನ್ನಡ ಸಾಹಿತ್ಯದಲ್ಲಿ ಸೌಂದರ್ಯ ಮೀಮಾಂಸೆ ಕುರಿತು ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವೋದಯದ ಸಂದರ್ಭದಲ್ಲಿ ರಮ್ಯ ಕವಿತೆಗಳ ಮೂಲಕ ಕಾವ್ಯಯಾನ ಆರಂಭಿಸಿದ ಅವರು ನಂತರ ತಮ್ಮದೇ ಆದ ಭಿನ್ನ ಕಾವ್ಯಮಾರ್ಗವನ್ನು ರೂಪಿಸಿಕೊಂಡರು. ಎಪ್ಪತ್ತರ ದಶಕದಲ್ಲಿ ಜಿ.ಎಸ್.ಎಸ್ ಹೋರಾಟಗಾರರಿಗೆ ಸ್ಫೂರ್ತಿಯಾಗಿದ್ದರು. ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ಹೋರಾಟದ ಮಾರ್ಗವನ್ನು ತೋರಿಸಿದವರು ಅವರು. ಆಧುನಿಕ ಜೀವನ ಶೈಲಿಯ ಯಾಂತ್ರಿಕ ಬುದುಕನ್ನು ಅವರು ತಮ್ಮ ಮುಂಬೈ ಜಾತಕ ಕವನದಲ್ಲಿ ಮನಮುಟ್ಟುವಂತೆ ನಿರೂಪಿಸಿದ್ದಾರೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಹಸೀಲ್ದಾರ್ ಅಮಿತಕುಮಾರ ಕುಲಕರ್ಣಿ, ಕನ್ನಡ ಸಾಹಿತ್ಯ ಪರಂಪರೆ ಶ್ರೇಷ್ಠವಾದದ್ದು. ಉದಯೋನ್ಮುಖ ಕವಿಗಳು ಹಳೆಯ ಕಾವ್ಯಗಳನ್ನು ಅಧ್ಯಯನ ಮಾಡುವುದರಿಂದ ಜ್ಞಾನದ ಹರಿವು ಹೆಚ್ಚುತ್ತದೆ ಎಂದರು.

ಕಸಾಪ ತಾಲೂಕು ಅಧ್ಯಕ್ಷ ಪ್ರಶಾಂತ ಮಠಪತಿ ಮಾತನಾಡಿ, ಪಾಶ್ಚಾತ್ಯ ಹಾಗೂ ಭಾರತೀಯ ಕಾವ್ಯ ಮೀಮಾಂಸೆಯ ಸೇತುವಂತೆ ಜಿ.ಎಸ್.ಎಸ್ ಕೆಲಸ ಮಾಡಿದ್ದಾರೆ. ಜತೆಗೆ ಪಾಶ್ಚಾತ್ಯ ಹಾಗೂ ಭಾರತೀಯ ಕಾವ್ಯ ಮೀಮಾಂಸೆಯ ಸಾಮ್ಯತೆಗಳನ್ನು ಅವರು ಗುರುತಿಸಿದರು. ಅವರು ಕನ್ನಡ ಸಾಹಿತ್ಯದಲ್ಲಿ ವಿಮರ್ಶೆಯ ದೃಷ್ಟಿಕೋನವನ್ನು ಬೆಳೆಸಿದ ಕವಿ ಹೃದಯಿ ವಿದ್ವಾಂಸರಾಗಿದ್ದರು ಎಂದರು.

ತಾಪಂ ಇಒ ಹಣಮಂತರಾಯ ಕೌಟಗೆ ಮಾತನಾಡಿ, ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಜಿ.ಎಸ್.ಎಸ್ ಕವಿಯಾಗಿಯೂ, ವಿದ್ವಾಂಸರಾಗಿಯೂ ಗುರುತಿಸಿಕೊಂಡವರು. ಅವರು ಕೇವಲ ವ್ಯಕ್ತಿಗಳನ್ನು ಬೆಳೆಸದೆ ಸಮುದಾಯವನ್ನು ಕಟ್ಟುವ ಪ್ರಯತ್ನ ಮಾಡಿದರು. ಪ್ರಸ್ತುತ ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಗಂಭೀರವಾದ ಸಂಶೋಧನೆ ನಡೆಯಬೇಕು ಎಂದರು.



ಚಕೋರ ಸಾಹಿತ್ಯ ವಿಚಾರ ವೇದಿಕೆ ಜಿಲ್ಲಾ ಸಂಚಾಲಕಿ ಡಾ.ಮಕ್ತುಂಬಿ ಎಂ, ಪಿಎಸ್ಐ ಆಶಾ ರಾಠೋಡ ಮಾತನಾಡಿದರು.

ಭಾಲ್ಕಿ ಹಿರೇಮಠದ ಪೂಜ್ಯ ಮಹಾಲಿಂಗ ದೇವರು ದಿವ್ಯ ಸಾನಿಧ್ಯ ವಹಿಸಿದ್ದರು. ಆಡಳಿತ ಅಧಿಕಾರಿ ಚನ್ನಬಸವ ಘಾಳೆ ಅಧ್ಯಕ್ಷತೆ ವಹಿಸಿದ್ದರು.

ಕಸಾಪ ಗೌರವಾಧ್ಯಕ್ಷ ಪ್ರೋ.ಎಸ್.ಎನ್.ಶಿವಣಕರ, ಉಪಾಧ್ಯಕ್ಷ ಧನರಾಜ ಭವರಾ, ಮಡಿವಾಳಪ್ಪ ಮಹಾಜನ, ಸಂತೋಷ ಸುಲಾಕೆ, ತಾಪಂ ಮಾಜಿ ಅಧ್ಯಕ್ಷ ಶ್ರೀರಂಗ ಪರಿಹಾರ, ಡಾ.ಎಸ್.ಎಸ್.ಮೈನಾಳೆ, ಮನೋಜ ಹಿರೇಮಠ, ಮಹಾದೇವ ಬಿರಾದಾರ, ರಾಜೇಶ್ವರಿ ಬಿರಾದಾರ, ಪಲ್ಲವಿ ನಾಯಕ್, ಶಿವಕುಮಾರ ಏಕಲಾರೆ, ಸುಭಾಷ ಧರಣೆ, ಜ್ಞಾನೋಬಾ ಹಂಡೆ, ದೇವಿದಾಸ ಡಾಂಗೆ, ನಿಜಲಿಂಗಯ್ಯ ಸ್ವಾಮಿ, ಶರಣಬಸವ ಗೋರ್ಟಾ ಇತರರಿದ್ದರು.

ಡಾ.ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ ಮಕ್ಕಳು ನಾಡಗೀತೆ ಹಾಡಿದರು. ಸಾಹಿತಿ ಸಂಗಮೇಶ ಮುರ್ಕೆ ಸ್ವಾಗತಿಸಿದರು. ಮಹಾದೇವ ಮಡಿವಾಳ ನಿರೂಪಣೆ ಮಾಡಿದರು.

ಕನ್ನಡ ಜಂಗಮರಾಗಿದ್ದ ಲಿಂಗೈಕ್ಯ ಡಾ.ಚನ್ನಬಸವ ಪಟ್ಟದ್ದೇವರ ಹುಟ್ಟೂರಾದ ಗಡಿಭಾಗದ ಕಮಲನಗರದಲ್ಲಿ ಸಾಹಿತಿಗಳ, ಕವಿಗಳ ಕುರಿತು, ಕನ್ನಡ ಸಾಹಿತ್ಯದ ಶ್ರೇಷ್ಠತೆಯನ್ನು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವಂತಹ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸುತ್ತ ಬರುತ್ತಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ನಿಜಕ್ಕೂ ಅಭಿನಂದನೀಯ.
ಪೂಜ್ಯ ಮಹಾಲಿಂಗ ದೇವರು, ಹಿರೇಮಠ ಸಂಸ್ಥಾನ ಭಾಲ್ಕಿ

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**